

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor : MARUTI BASAVANTAPPA HOSAMANI

Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

RNI REG No. : KARKAN/2016/75068

SIHI KAHI

KANNADA DAILY MORNING BAGALKOT

Volume : 07 Issue : 152 Wednesday 19-02-2025 E-mail : maruti.b.hosamani76@gmail.com Page: 4 Price : Rs. 1/-


## ಪ್ರಥಮ ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿರುವ ಎಂ.ಎ. ಹಿರೆವಡೆ ಯವರಿಗೆ: ಶಾಸಕ ಜಿ.ಎಸ್ ಪಾಟೀಲರಿಂದ ವಿಶೇಷ ಆಹ್ವಾನ

**ಸಿಹಿ ಕಹಿ ಸುದ್ದಿ,**



**ನಿಡಗುಂದಿ :** ನರೇಗಲ್ ಹೋಬಳಿಯ ನಿಡಗುಂದಿ ಕೊಪ್ಪ ಗ್ರಾಮದಲ್ಲಿ ಫೆಬ್ರುವರಿ 20 ರಂದು ನಡೆಯಲಿರುವ ಗಜೇಂದ್ರಗಡ ತಾಲ್ಲೂಕಿನ ಪ್ರಥಮ ತಾಲ್ಲೂಕ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಮಜರೆ ಕೋಡಿಕೊಪ್ಪ ಗ್ರಾಮದ ಸಾಹಿತಿ ಹಾಗೂ ನಿವೃತ್ತ ಶಿಕ್ಷಕ ಎಂ.ಎ ಹಿರೆವಡೆಯರ ಅವರನ್ನು ರೋಣ ಶಾಸಕ ಜಿ.ಎಸ್ ಪಾಟೀಲರು ಶನಿವಾರ ಸನ್ಮಾನಿಸಿ ಸಾಹಿತ್ಯ ಸಮ್ಮೇಳನಕ್ಕೆ ಆಮಂತ್ರಣ ಪತ್ರಿಕೆ ನೀಡಿ ಆಹ್ವಾನಿಸಿದರು.

ಆನಂತರ ಮಾತನಾಡಿದ ಶಾಸಕ ಜಿ.ಎಸ್ ಪಾಟೀಲ ಹಿರವಡೆಯರ ಗುರುಗಳ ಜ್ಞಾನ ಅಪಾರವಾದುದು. ವಯೋವೃದ್ಧರೂ,ಜ್ಞಾನವೃದ್ಧರೂ ಆಗಿರುವ ಅವರಿಗೆ ಸಂದಿರುವ ಈ ಗೌರವ ನಿಜಕ್ಕೂ ಸ್ತುತ್ಯಾರ್ಹವಾದುದು. ಈ ಮೂಲಕ ಸರ್ವಾಧ್ಯಕ್ಷ ಸ್ಥಾನಕ್ಕೆ ಒಬ್ಬ ಅರ್ಹ ವ್ಯಕ್ತಿಯನ್ನು ಆರಿಸಿದ ಸಮಾಧಾನ ಆಯ್ಕೆ ಸಮಿತಿಗಿದೆ' ಎಂದರು.

ಕೋಡಿಕೊಪ್ಪದ ಹುಚ್ಚರಪ್ಪಜ್ಜ ನವರ ಜೀವನ ಚರಿತ್ರೆ ಸೇರಿದಂತೆ ಕನ್ನಡದ ಅನೇಕ ಕೃತಿಗಳನ್ನು ಇಂಗ್ಲಿಷ್ ಭಾಷೆಗೆ ಅನುವಾದ ಮಾಡಿರುವುದು ಸೇರಿದಂತೆ ಸಾಹಿತ್ಯ ಕೃಷಿ ಮೂಲಕ ಹೆಸರು ಪಡೆದಿದ್ದಾರೆ. ಇಂತಹ ಹಿರಿಯರ ಸಮ್ಮುಖದಲ್ಲಿ ಪ್ರಥಮ ಸಾಹಿತ್ಯ ಸಮ್ಮೇಳನ ನಡೆಯುತ್ತಿರುವುದು ಖುಷಿ ನೀಡಿದೆ. ಸಮ್ಮೇಳನದ ಯಶಸ್ಸಿಗೆ ಎಲ್ಲಾ ರೀತಿಯ ಸಹಕಾರ ನೀಡಲಾಗುವುದು. ಕನ್ನಡಾಭಿಮಾನಿಗಳು, ಆಜೀವ ಸದಸ್ಯರು ಎಲ್ಲರೂ ಪಾಲ್ಗೊಂಡು ಯಶಸ್ವಿ ಗೊಳಿಸಬೇಕು ಎಂದರು.

ಸನ್ಮಾನ ಸೀಕರಿಸಿ ಮಾತನಾಡಿದ ಎಂ.ಎ ಹಿರೆವಡೆಯರ, 'ನನ್ನ ಮೇಲಿನ ಅಭಿಮಾನ ಮತ್ತು ವಿಶ್ವಾಸ ದಿಂದ ತಾಲ್ಲೂಕು ಸಮ್ಮೇಳನದ ಅಧ್ಯಕ್ಷನನ್ನಾಗಿ ಆಯ್ಕೆ ಮಾಡಿರುವುದಕ್ಕೆ ಕೃತಜ್ಞನಾಗಿರುವೆ' ಎಂದರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ತಾಲ್ಲೂಕ ಘಟಕದ ಅಧ್ಯಕ್ಷ ಅಮರೇಶ ಗಾಣಿಗೇರ ಮತ್ತು ಹೋಬಳಿ ಘಟಕದ ಅಧ್ಯಕ್ಷ ಎಂ ವಿ ವಿರಾಪುರ, ವಿ.ಬಿ ಸೋಮನಕಟ್ಟಿಮಠ, ನಿವೃತ್ತ ಶಿಕ್ಷಕ ಎಂ.ಎಸ್ ದಢಸೂರಮಠ, ಪಟ್ಟಣ ಪಂಚಾಯಿತಿ ಅಧ್ಯಕ್ಷ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯ ಮಠ, ಸ್ಥಾಯಿ ಸಮಿತಿ ಚೇರ್ಮನ್ ಮುತ್ತಪ್ಪ ನೂಲ್ಕಿ, ಮುಖ್ಯಾಧಿಕಾರಿ ಮಹೇಶ ನಿಡಶೇಶಿ, ಶಹರ ಘಟಕ ಕಾಂಗ್ರೆಸ್ ಅಧ್ಯಕ್ಷ ಶಿವನಗೌಡ ಪಾಟೀಲ, ನಿಂಗನಗೌಡ ಲಕ್ಕನಗೌಡ್ರ, ವಿರೂಪಾಕ್ಷಗೌಡ ಹಿರೆಗೌಡ್ರ, ಸುನೀಲ ಬಸವರಡ್ಡರ, ಎಲ್.ಎಸ್ ಗೌರಿ, ಅಲ್ಲಾಬಕ್ಷಿ ನದಾಫ್, ಬೀಚಿ ಬಳಗದ ಅಧ್ಯಕ್ಷ ಕೆ ಎಸ್ ಕಳಕಣ್ಣವರ್ ಉಪಸ್ಥಿತರಿದ್ದರು.

**ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಎಸ್.ವಿ ಸಂಕನಗೌಡ್ರ. ರೋಣ.ಗದಗ**

## ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜೊತೆಗೆ ದಿಸೆಯಲ್ಲಿ ಸಾಹಿತ್ಯ ಕಲೆ ನಾಡು ನುಡಿ, ಜಲ, ನೆಲ, ಭಾಷೆಯ ಅಭಿಮಾನ ವಿರಬೇಕು: ಬಾಪೂಜಿ ಸಮೂಹ ಸಂಸ್ಥೆ ಕಾರ್ಯದರ್ಶಿ ಡಾ. ಕೆ.ಎಂ. ವೀರೇಶ್

**ಸಿಹಿ ಕಹಿ ಸುದ್ದಿ,**



**ಕೆ.ಹೊಸಹಳ್ಳಿ :** ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜೊತೆಗೆ ದಿಸೆಯಲ್ಲಿ ಸಾಹಿತ್ಯ ಕಲೆ ನಾಡು ನುಡಿ, ಜಲ, ನೆಲ, ಭಾಷೆಯ ಅಭಿಮಾನ ವಿರಬೇಕು. ವಿದ್ಯಾರ್ಥಿಗಳು ಉನ್ನತ ವಿದ್ಯಾಭ್ಯಾಸ ಮಾಡಬೇಕು. ಉನ್ನತ ಹುದ್ದೆಗಳಿಗೆ ತಲುಪಬೇಕು. ಮತ್ತು ಸಂಸ್ಕಾರ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವಂತಹ ಕೆಲಸ ನಾವು ನೀವೆಲ್ಲರೂ ಮಾಡಬೇಕಾಗಿದೆ. ಎಂದು ರಾಜ್ಯ ಉಪಾಧ್ಯಕ್ಷರು ಶರಣ ಸಾಹಿತ್ಯ ಪರಿಷತ್ತು ಬಾಪೂಜಿ ಸಮೂಹ ಸಂಸ್ಥೆ ಕಾರ್ಯದರ್ಶಿ ಡಾ, ಕೆ.ಎಂ ವೀರೇಶ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಇಲ್ಲಿನ ಕಾನಾ ಹೊಸಹಳ್ಳಿ ಸೋಫಿಯಾ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶರಣ ಸಾಹಿತ್ಯ ಪರಿಷತ್ ಕೂಡ್ಲಿಗಿ ಇವರ ವತಿಯಿಂದ ವಿದ್ವಾನ್ ಶ್ರೀ ಬಿ.ಎಂ ಗುರು ಸಿದ್ದಯ್ಯನವರ ಸ್ಮರಣೆ ಹಾಗೂ ದತ್ತಿ ಉಪನ್ಯಾಸ ಮತ್ತು ಸೋ.ಮ ಚಂದ್ರಶೇಖರಯ್ಯ ಲೋಲಾಕ್ಷಮ್ಮ ದತ್ತಿ ಉಪನ್ಯಾಸ ಕಾರ್ಯಕ್ರಮ ನಡೆಯಿತು.

ವಿದ್ವಾನ್ ಬಿ.ಎಂ ಗುರುಸಿದ್ದಯ್ಯನವರ ಜೀವನ ಸಂದೇಶ ಕುರಿತು ಮಾತನಾಡಿ ಇವರು ವೃತ್ತಿಯಲ್ಲಿ ಶಿಕ್ಷಕರಾದರು ಸಹ ಪ್ರವೃತ್ತಿಯಲ್ಲಿ ಜ್ಯೋತಿಷ್ಯ, ಆಯುರ್ವೇದ ಪಂಡಿತರು, ಜೊತೆಗೆ ಸಾಹಿತಿ ಹಾಗೂ ಕನ್ನಡ ಪಂಡಿತರೆಂದೆ ಈ ಭಾಗದಲ್ಲಿ ಖ್ಯಾತಿ ಪಡೆದಿದ್ದರು. ಕನ್ನಡ ಸಂಸ್ಕೃತ ವೈದಿಕ ಅಧ್ಯಾತ್ಮ ಗುರುಸಿದ್ದಯ್ಯನವರು ಎಂಥ ಕಠಿಣ ವಿಷಯದ ಬಗ್ಗೆ ನಿರರ್ಗಳವಾಗಿ ಮಾತನಾಡ ಬಲ್ಲವರಾಗಿದ್ದರು ಎಂದು ಹೇಳಿದರು. ಸಮಾಜದಲ್ಲಿ ಶಿಕ್ಷಕರ ಪಾತ್ರ ಕುರಿತು ವಿದ್ಯಾರ್ಥಿಗಳಿಗೆ ಸವಿವರವಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಎನ್. ಎಂ ರವಿಕುಮಾರ್ ಪ್ರಸ್ತಾವಿಕವಾಗಿ ಮತ್ತು ದತ್ತಿ ಉಪನ್ಯಾಸ ಮಾತನಾಡಿ ಕೂಡ್ಲಿಗಿ ತಾಲೂಕಿನಲ್ಲಿ ವಿದ್ವಾಂಸರೆಂದರೆ ಬಿ.ಎಮ್ ಗುರು ಸಿದ್ದಯ್ಯನವರು, ಕೋ ಚನ್ನಬಸಪ್ಪ, ಹಿಮ ನಾಗಯ್ಯ, ವೃಷಭೇಂದ್ರಸ್ವಾಮಿ, ಸೋ. ಮ ಚಂದ್ರಶೇಖರಯ್ಯ ಸೇರಿದಂತೆ ಅನೇಕ ವಿದ್ವಾಂಸರು ಈ ನಾಡಿಗೆ ತನ್ನದೇ ಆದ ಕೊಡುಗೆಯನ್ನು ಕೊಟ್ಟಿದ್ದಾರೆ ಎಂದರು. ಮತ್ತು ಶರಣ ಸಾಹಿತ್ಯ ಪರಿಷತ್ತು ನಡೆದು ಬಂದ ದಾರಿಯ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಬಿ.ಎಂ ಪ್ರಭುದೇವ್ ಮಾತನಾಡಿ ನಮ್ಮ ತಂದೆಯವರು ಹಳೆಗನ್ನಡ ಕಾವ್ಯಗಳನ್ನು ಸುಶಾವ್ಯವಾಗಿ ಗಮಕಿಗಳಂತೆ ಪ್ರೀತಿ ವಿದ್ಯಾರ್ಥಿಗಳ ಹೃದಯಕ್ಕೆ ಆಳಕ್ಕೆ ಇಳಿಯುವಂತೆ ಬೋಧನೆ ನಡೆಸುತ್ತಿದ್ದರು. ಹಾಗೆಯೇ ಜ್ಯೋತಿಷ್ಯ ಶಾಸ್ತ್ರವನ್ನು ಆಳವಾಗಿ ಅಧ್ಯಯನ ಮಾಡಿದ್ದು. ಶರಣರ ವಚನಗಳನ್ನು. ಪ್ರಭುಲಿಂಗ ಲೀಲೆ, ಶೂನ್ಯ ಸಂಪಾದನೆಂತಹ ಗ್ರಂಥಗಳನ್ನು ಆಳವಾಗಿ ಅಭ್ಯಾಸ ಮಾಡಿದ್ದರು. ಅಖಿಲ ಭಾರತ ಶರಣ ಸಾಹಿತ್ಯಪರಿಷತ್ತಿನ 1996.ರಲ್ಲಿ ಕೂಡ್ಲಿಗಿಯಲ್ಲಿ ಬಳ್ಳಾರಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಸಮ್ಮೇಳನ ನಡೆಸಿತು ಆ ಸಮ್ಮೇಳನದ ಅಧ್ಯಕ್ಷತೆಯನ್ನು ಗುರುಸಿದ್ದಯ್ಯನವರಿಗೆ ನೀಡಿ ಗೌರವಿಸಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾ ಕದಳಿ ವೇದಿಕೆ ಅಧ್ಯಕ್ಷ ಇಂದುಮತಿ ತಿಪ್ಪೇಸ್ವಾಮಿ, ಶರಣ ಸಾಹಿತ್ಯ ಪರಿಷತ್ತಿನ ಖಜಾಂಚಿ ಕೆ.ಜಿ ಕುಮಾರ ಗೌಡ, ಹೊಂಬಾಳೆ ರೇವಣ್ಣ, ಬಿ.ಎಮ್ ರಾಜಶೇಖರ್, ಶರಣಗೌಡ್ರು ಕಾರ್ಯಕ್ರಮ ಅಧ್ಯಕ್ಷತೆಯನ್ನು ವಹಿಸಿದ್ದರು ಸಾ. ಮ.ಸಂಗಮೇಶ್ವರಯ್ಯ, ಹಿರಿಯ ಕವಿಗಳಾದ ಯು ಜಗನ್ನಾಥ್ ,ಉಮೇಶ್ ಹೆಚ್ ಎಂ , ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ಕಾರ್ಯದರ್ಶಿ ಕೆ..ಎಸ್.ವೀರೇಶ್, ಹೆಚ್. ಬಿ ಕಣ್ಣಿ , ಶಿವಪ್ರಕಾಶ್ ಕೆಂಚಮ್ಮನಹಳ್ಳಿ, ಪ್ರಭು ಶಂಕರ,ವಸಂತ್ ಸಜ್ಜನ್ , ಶರಣಗೌಡ, ಮಂಜುನಾಥ್, ಕೂಡ್ಲಿಗಿ ನೂತನ ಕದಳಿ ವೇದಿಕೆ ಅಧ್ಯಕ್ಷ ತಿಪ್ಪಿರಮ್ಮ, ಕೆಎಂ ಸುಮತಿ, ಸೇರಿದಂತೆ

ಇದೇ ಸಂದರ್ಭದಲ್ಲಿ ಶರಣಸಾಹಿತ್ಯಪರಿಷತ್ತಿನ 5 ದತ್ತಿ ಸ್ವೀಕರಿಸಿದರು,ಆಂಗ್ಲ ಮಾಧ್ಯಮ ಶಾಲೆಯ ಮುಖ್ಯೋಪಾಧ್ಯಾಯರು ಸಿಬ್ಬಂದಿ ವರ್ಗ ಹಾಗೂ ಸೋಪಿಯಾ ಹಿ. ಪ್ರಾ ಶಾಲೆ. ಸೇರಿದಂತೆ ವಿದ್ಯಾರ್ಥಿ ವಿದ್ಯಾರ್ಥಿನಿಯರು ಇತರರು ಸಾರ್ವಜನಿಕರು ಉಪಸ್ಥಿತರಿದ್ದರು.

**ಹೋಬಳಿ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಕೆ.ಎಸ್ ವೀರೇಶ್.ಕೆ.ಹೊಸಹಳ್ಳಿ**

## ಹೈನುಗಾರಿಕೆಯಿಂದ ಮಹಿಳಾ ಆರ್ಥಿಕತೆ ಹೆಚ್ಚಳ: ಸಿದ್ದು ಸವದಿ



**ರಬಕವಿ-ಬನಹಟ್ಟಿ :** ರೈತ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬನೆಯತ್ತ ಸಾಗಲು ಕೃಷಿಯೊಂದಿಗೆ ಹೈನೋದ್ಯಮದಲ್ಲಿ ಕೂಡ ತೊಡಗುವುದರಿಂದ ತಲಾ ಆದಾಯ ಹೆಚ್ಚಳಗೊಂಡು ಜೀವನ ನಿರ್ವಹಣೆ ಸುಲಭವಾಗುತ್ತದೆ ಮತ್ತು ದೇಶದ ಆದಾಯವೂ ವೃದ್ಧಿಯಾಗುತ್ತದೆಂದು ಶಾಸಕ ಸಿದ್ದು ಸವದಿ ಹೇಳಿದರು.

ತಾಲೂಕಿನ ಮದನಮಟ್ಟಿ ಗ್ರಾಮದ ಮಹಿಳಾ ಹಾಲು ಉತ್ಪಾದಕರ ಸಹಕಾರ ಸಂಘ ಮತ್ತು ಹನುಮಾನ್ ಪತ್ತಿನ ಸಹಕಾರಿ ಸಂಘದ ನೂತನ ಕಟ್ಟಡವನ್ನು ಸಸಿಗೆ ನೀರುಣಿಸಿ ಚಾಲನೆ ನೀಡಿ ಮಾತನಾಡಿದ ಅವರು, ಹೈನುಗಾರಿಕೆಯಿಂದ ಸದಸ್ಯರಿಗೆ ದಾಖಲೆಯ ಲಾಭಾಂಶ ನೀಡುತ್ತಿರುವ ಸಂಘದ ಕಾರ್ಯ ಸ್ತುತ್ಯಾರ್ಹವಾಗಿದೆ.

ಕೆಎಂಎಫ್ ತನ್ನ ಸದಸ್ಯರಿಗೆ ಹೈನುಗಾರಿಕೆ ಉತ್ತೇಜಿಸಲು ನೀಡುವ ನೆರವಿನ ಸಲಕರಣೆಗಳು ಸದಸ್ಯರಿಗೂ ತಲುಪುವುದರಿಂದ ಹೆಚ್ಚಿನ ದರದ ಆಕರ್ಷಣೆಗೆ ಖಾಸಗಿಯವರಿಗೆ ಹಾಲು ಮಾರದೇ ಎಲ್ಲ ಸದಸ್ಯರು ಕೆಎಂಎಫ್ ಗೆ ನೀಡಿ ಲಕ್ಷಾಂತರ ಬೆಲೆಯ ಯಂತ್ರೋಪಕರಣಗಳನ್ನು ಪಡೆಯಲು ಸಹಕರಿಸಬೇಕು. ಯಡಿಯೂರಪ್ಪ ಮುಖ್ಯಮಂತ್ರಿ ಆಗಿದ್ದಾಗ, ರೈತರು ನೀಡುವ ಹಾಲಿಗೆ ಪ್ರೋತ್ಸಾಹಧನದ ನೀಡಿಕೆ ಆರಂಭಿಸಿದ್ದರು. ಅದು ಈಗಲೂ ಮುಂದುವರೆದಿದೆ. ಸದಸ್ಯರು ಇದರ ಪ್ರಯೋಜನ ಹೊಂದಬೇಕು. ಸಂಘ ಇಂದು ಸಹಕಾರಿ ಬ್ಯಾಂಕ್ಗೆ ಚಾಲನೆ ನೀಡಿರುವುದು ಮಹಿಳೆಯರ ಆರ್ಥಿಕ ಬೆಳವಣಿಗೆಗೆ ನೆರವಾಗುವುದು ಮತ್ತು ಗ್ರಾಮದ ಅಭಿವೃದ್ಧಿಗೂ ಪೂರಕವಾಗಿದೆ ಎಂದರು.

ಸಮಾರಂಭದ ದಿವ್ಯ ಸಾನಿಧ್ಯ ವಹಿಸಿದ್ದ ಹಳಿಂಗಳಿಯ ಕಮರಿಮಠ ಸ್ವಾಮೀಜಿ ಅವರು, ಬನಹಟ್ಟಿ ಹಿರೇಮಠದ ಶರಣಬಸವ ಶಿವಾಚಾರ್ಯರ ಹಾಗೂ ಚಿಮ್ಮಡದ ಪ್ರಭುದೇವರು ಆಶೀರ್ವಚನ ನೀಡಿ, ಮಹಿಳೆಯರು ಆರ್ಥಿಕವಾಗಿ ಪ್ರಗತಿ ಹೊಂದಿದರೆ ದೇಶ ಸಬಲವಾಗುವುದು ಖಚಿತ. ಕೃಷಿ ಪೂರಕ ಹೈನೋದ್ಯಮದತ್ತ ಗ್ರಾಮದ ಮಹಿಳೆಯರು ಸಂಘಟಿತರಾಗಿ ತೊಡಗಿರುವುದು, ಹೆಚ್ಚಿನ ಲಾಭಾಂಶ ಹೊಂದಿರುವುದು ಇತರೆ ಪ್ರದೇಶಗಳ ಮಹಿಳೆಯರಿಗೆ ಸ್ಫೂರ್ತಿಯಾಗಲಿದೆ ಎಂದರು. ದೇಶದ ಆರ್ಥಿಕ ಪ್ರಗತಿಯಲ್ಲಿ ಮಹಿಳೆಯರ ಪಾಲೂ ಹೆಚ್ಚಲೆಂದು ಹಾರೈಸಿದರು.

ವೇದಿಕೆಯಲ್ಲಿ ಬಾಬಾಗೌಡ ಪಾಟೀಲ, ಸಂಘದ ಅಧ್ಯಕ್ಷೆ ಮಹಾದೇವಿ ಫಿರೋಜಿ, ಪ್ರೊ. ಬಸವರಾಜ ಕೊಣ್ಣೂರ ವಿಮುಲ್ನ ಈರನಗೌಡ ಕರಿಗೌಡರ, ಲಕ್ಕಪ್ಪ ಪಾಟೀಲ, ಲಿಂಗರಾಜ ಬಿರಾದಾರ ಪಾಟೀಲ, ಚಂದ್ರಶೇಖರ ಆದಬಸಪ್ಪಗೋಳ, ಸಂಗಣ್ಣ ಹಂಡಿ, ಸಿದ್ಧರಾಯ ಜಂಗಮಶೆಟ್ಟಿ, ಎಂ.ಡಿ. ಡಿ. ಟಿ. ಶಿವಶಂಕರಸ್ವಾಮಿ, ಡಾ. ಗಜರಾಜ ರಣತೂರ, ಸಂಗೀತಾ ಭೇಂಡೆ, ಶ್ರೀಶೈಲ ದಲಾಲ, ಶ್ರೀಶೈಲ ಬೀಳಗಿ, ಸುರೇಶ ಅಕ್ಕಿವಾಟ, ಧರೆಪ್ಪ ಉಳ್ಳಾಗಡ್ಡಿ, ಆನಂದ ಕಂಪು ಮುಂತಾದವರು ಉಪಸ್ಥಿತರಿದ್ದರು.

## ಹೊಲಿಗೆ ತರಬೇತಿ ನಿರುದ್ಯೋಗಿಗಳ ಬದುಕಿಗೆ ದಾರಿ



**ರಬಕವಿ-ಬನಹಟ್ಟಿ:** ಹೊಲಿಗೆ ತರಬೇತಿ ನಿರುದ್ಯೋಗಿಗಳ ಬದುಕಿಗೆ ದಾರಿ ದೀಪವಾಗಿದೆ ಎಂದು ಇನ್ಫೋಸಿಸ್ ಕಾರ್ಯಕರ್ತರಾದ ನಾರಾಯಣ ಕುಲಕರ್ಣಿ ಹೇಳಿದರು.

ನಗರದ ಯಲ್ಲಮ್ಮದೇವಿ ಸಮುದಾಯ ಭವನದಲ್ಲಿ ಮಹಾಲಕ್ಷ್ಮಿ ಮಹಿಳಾ ಮಂಡಳ ಹಾಗು ಇನ್ಫೋಸಿಸ್ ಸಂಸ್ಥೆಯಿಂದ ಮಹಿಳೆಯರಿಗೆ ಉಚಿತ ಹೊಲಿಗೆ ತರಬೇತಿ ಹಾಗು ಯಂತ್ರಗಳ ವಿತರಣೆಯ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಅತ್ಯಾಧುನಿಕ ಹೊಲಿಗೆ ತರಬೇತಿ ಉಚಿತವಾಗಿ, ಜತೆಗೆ ಶಿಷ್ಯ ವೇತನ, ಕೊನೆಗೆ ಉದ್ಯೋಗವೂ ಖಾತ್ರಿಯಾಗಿದೆ. ಮನೆಯಲ್ಲಿ ಒಂದು ಹಸುವಿದ್ದರೆ ಸಾಕು, ಮೊದಲು ಆ ಕುಟುಂಬದ ನಿರ್ವಹಣೆಯಾಗುತ್ತಿತ್ತು. ಇಂದು ಒಂದು ಹೊಲಿಗೆ ಯಂತ್ರವಿದ್ದರೆ ಸಾಕು. ಒಂದು ಕುಟುಂಬ ಅದು ಸಲಹುತ್ತದೆ ಎಂದು ಕುಲಕರ್ಣಿ ಹೇಳಿದರು.

ಸಾನಿಧ್ಯ ವಹಿಸಿದ್ದ ಹಿರೇಮಠದ ಶರಣಬಸವ ಶಿವಾಚಾರ್ಯರು ಮಾತನಾಡಿ, ಮಹಿಳೆಯರು ಆರ್ಥಿಕವಾಗಿ ಹಣಕಾಸಿನ ನಿರ್ವಹಣೆಯಲ್ಲಿ ಸಬಲರಾಗಿರುತ್ತಾರೆ. ಈ ಯಂತ್ರಗಳನ್ನು ಸದುಪಯೋಗ ಪಡಿಸಿಕೊಂಡು ಆರ್ಥಿಕವಾಗಿ ಸ್ವಾವಲಂಬಿ ಜೀವನ ನಡೆಸಬೇಕೆಂದರು.

ಮೀನಾಕ್ಷಿ ಸುಣದಾಳ ಮಾತನಾಡಿ, 250 ಕ್ಕೂ ಹೆಚ್ಚು ಮಹಿಳೆಯರಿಗೆ ಉಚಿತವಾಗಿ ಯಂತ್ರಗಳನ್ನು ವಿತರಿಸಲಾಗುತ್ತಿದೆ. ಇದರ ಸದುಪಯೋಗ ಪಡೆದುಕೊಂಡು ಸ್ವಾವಲಂಬಿ ಬದುಕಿಗೆ ಮಹಿಳೆಯರು ಸನ್ನದ್ಧರಾಗಬೇಕೆಂದರು.

ಶ್ರೀಶೈಲ ದಭಾಡಿ ಅಧ್ಯಕ್ಷತೆ ವಹಿಸಿದ್ದರು. ಅತಿಥಿಗಳಾಗಿ ಭೀಮಶಿ ಮಗದುಮ್, ಮಲ್ಲಿಕಾರ್ಜುನ ತುಂಗಳ, ಸಿದ್ಧನಗೌಡ ಪಾಟೀಲ, ಮಲ್ಲಪ್ಪ ಮುರಗೋಡ, ಪ್ರಭಾಕರ ಮೋಳೇದ, ಸಂಜಯ ಡಾಗಾ, ಸುರೇಶ ಗಸ್ತಿ, ಅಶ್ವಿನಿ ನಾಯಕರ, ನವೀನ ಬಾಣಕಾರ ಸೇರಿದಂತೆ ಇನ್ನೂ ಅನೇಕರು ಭಾಗವಹಿಸಿದ್ದರು.

## ಮಹಾತ್ಮರ ನುಡಿಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಿ

### * ನುಡಿದಂತೆ ನಡೆಯಲು ಪ್ರಯತ್ನಿಸಿದರೆ ಮಾನವನಾಗಿ ಹುಟ್ಟಿರುವುದಕ್ಕೆ ಸಾರ್ಥಕ



**ರಬಕವಿ-ಬನಹಟ್ಟಿ :** ತನ್ನತಾನರಿವ ದಾರಿ ಅಷ್ಟು ಸುಲಭವಾದದ್ದೇನಲ್ಲ. ಆ ಹಾದಿಯ ಮೊದಲ ಹೆಜ್ಜೆಯೆಂದರೆ ಪುರಾಣ ಪ್ರವಚನಗಳ ಕೇಳುವುದು. ಸತ್ಸಂಗ ಶಿವಾನುಭವಗಳ ನಡೆಸುವುದು. ಆಲಿಸಿದ ನಾಲ್ಕು ಮಾತುಗಳಲ್ಲಿ ಒಂದನ್ನಾದರೂ ನಡೆಯಲು ಪ್ರಯತ್ನಿಸಿದರೆ ಮಾನವನಾಗಿ ಹುಟ್ಟಿರುವುದಕ್ಕೆ ಜನ್ಮ ಸಾರ್ಥಕ. ಅಂತೆಯೇ ನವವಿಧ ಭಕ್ತಿಗಳಲ್ಲಿ ಶ್ರವಣ ಭಕ್ತಿಯೇ ಮೊದಲನೇಯದು. ನೆರೆಕೇಳು ಕೇಳಿದುದನರಿ ಎಂದು ಮಹಾತ್ಮರು ಹೇಳಿರುವ ನುಡಿಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಿ ಎಂದು ರಬಕವಿಯ ಗುರುದೇವ ಬ್ರಹ್ಮಾನಂದ ಆಶ್ರಮದ ಗುರುಸಿದ್ಧೇಶ್ವರ ಶ್ರೀಗಳು ಹೇಳಿದರು.

ಮಂಗಳವಾರ ರಾತ್ರಿ ರಬಕವಿ ಬನಶಂಕರಿ ದೇವಸ್ಥಾನದ ಜಾತ್ರಾ ಮಹೋತ್ಸವದ ನಿಮಿತ್ಯ ಜರುಗಿದ ಪ್ರವಚನ ಸಮಾರಂಭಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮನ – ಆತ್ಮಗಳ ವಿಕಾಸಕ್ಕೆ ಬೇಕಾದ ಅರಿವಿನ ಆಹಾರವನ್ನು ಕಿವಿಯ ಮೂಲಕವೇ ಆಲಿಸಬೇಕು. ಅಂದಾಗ ಮಾತ್ರ ಬದುಕು ಸಾರ್ಥಕತೆ ಹೊಂದುವುದು. ದೇಹದ ಪೋಷಣೆಗೆ ಬೇಕಾದ ಆಹಾರವನ್ನು ಬಾಯಿಂದ ಸ್ವೀಕರಿಸುವಂತೆ, ಭಕ್ತಿಯ ಮಾತುಗಳನ್ನು, ಸನ್ಮಾರ್ಗ ತೋರುವ ಮಾತುಗಳನ್ನು, ಸ್ವರೂಪ ಜ್ಞಾನ ಆಗುವವರೆಗೂ ಕೇಳಬೇಕು ಎಂದು ಶ್ರೀಗಳು ಹೇಳಿದರು.

ದೇವಿಯ ಪುರಾಣವು ದೇಹದ ಪುರಾಣವೇ ಆಗಿದೆ. ಸಾಮಾನ್ಯ ಜನರಿಗೆ ತಿಳಿಯಲು ಸುಲಭವಾಗಲೆಂದು ರಚನೆಗೊಂಡಿರುವಂತಹುದು. ದೇವಿಯ ಕಥೆಗಳ ಮೂಲಕ, ದೇವ ದಾನವರ ಯುದ್ಧಗಳ ಮೂಲಕ ಭಕ್ತಿಯನ್ನು ಬೆಳೆಸಿ, ಜ್ಞಾನವನ್ನು ಉಣಿಸಿ ಆತ್ಮಾನಂದವನ್ನು ಕರುಣಿಸುವ ವಿಶೇಷ ವಿವರಣೆ ಇದರಲ್ಲಿದೆ.

ಸಮಾರಂಭದಲ್ಲಿ ಕರಿಕಟ್ಟಿ ಶಿವಾನಂದ ಆಶ್ರಮದ ಡಾ. ಬಸವರಾಜ ದೇವರು, ಪ್ರೊ. ಎಂ. ಎಸ್. ಬದಾಮಿ, ಮಹಾದೇವ ಕವಿಶೆಟ್ಟಿ, ಬನಶಂಕರಿ ದೇವಿ ಸಮಸ್ತ ದೈವ ಮಂಡಳಿ, ಮಹಿಳಾ ಮಂಡಳಿ, ಯುವಕ ಮಂಡಳಿಯವರು ಸೇರಿದಂತೆ ಇನ್ನೂ ಅನೇಕರು ಉಪಸ್ಥಿತರಿದ್ದರು.

## ಶೈಕ್ಷಣಿಕ ಬಲವರ್ಧನೆಗೆ ಕಲಿಕಾ ಹಬ್ಬ ಪೂರಕ: ಅಂಗಡಿ



**ಮೂಡಲಗಿ :** ಸರ್ಕಾರಿ ಶಾಲೆಗಳಿಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳಿಗೆ ಅದರಲ್ಲೂ ವಿಶೇಷವಾಗಿ ಮೂಲಭೂತ ಸಾಕ್ಷರತೆ ಮತ್ತು ತಂತ್ರಜ್ಞಾನದ ಚಟುವಟಿಕೆಗಳ ಬಲವರ್ದನೆಗೆ ಕಲಿಕಾ ಹಬ್ಬಪೂರಕ ಹಾಗೂ ಸಂತೋಷದಾಯಕ ಕಲಿಕಾ ವಾತಾವರಣ ಪ್ರೇರೇಪಿಸುತ್ತದೆ ಎಂದು ಕಲ್ಲೋಳಿ ಸಮೂಹ ಸಂಪನ್ಮೂಲ ವ್ಯಕ್ತಿ ಬಸವರಾಜ ಅಂಗಡಿ ಹೇಳಿದರು.

ಅವರು ತುಕ್ಕಾನಟ್ಟಿಯ ಸರ್ಕಾರಿ ಮಾದರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಕಲ್ಲೋಳಿ ಸಮೂಹ ಸಂಪನ್ಮೂಲ ಕೇಂದ್ರಮಟ್ಟದ ಕಲಿಕಾಹಬ್ಬದಲ್ಲಿ ಭಾಗವಹಿಸಿ ಪ್ರಾಸ್ತಾವಿಕವಾಗಿ ಮಾತನಾಡುತ್ತಿದ್ದರು. ಕಲೆ ಕುಶಲತೆ ಆಧಾರಿತ ಸೃಜನಾತ್ಮಕ ಚಟುವಟಿಕೆಗಳು ಮಕ್ಕಳ ಕಲಿಕೆಯನ್ನು ಮೋಜಿನೊಂದಿಗೆ ಸಂಯೋಜಿಸಲು ನೆರವಾಗುತ್ತವೆ ಎಂದರು.

ಗ್ರಾಮ ಪಂಚಾಯತ ಉಪಾಧ್ಯಕ್ಷೆ ಸುನಂದಾ ಭಜಂತ್ರಿ ಮಾತನಾಡಿ ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ಹಾಗೂ ಮೂಲಭೂತ ಸೌಲಭ್ಯಗಳು ಸಿಗುತ್ತಿರುವುದರಿಂದ ವಿದ್ಯಾರ್ಥಿಗಳು ಅದರ ಲಾಭ ಪಡೆದುಕೊಂಡು ಭವಿಷ್ಯ ಕಟ್ಟಿಕೊಳ್ಳಬೇಕೆಂದರು. ಎಲ್ಲ ವಿದ್ಯಾರ್ಥಿಗಳು ಸರ್ಕಾರಿ ಶಾಲೆಯಲ್ಲಿ ಕನ್ನಡ ಮಾದ್ಯಮದಲ್ಲಿಯೇ ಕಲಿಯಬೇಕೆಂದು ಕಿವಿಮಾತು ಹೇಳಿದರು. ತುಕ್ಕಾನಟ್ಟಿಯ ಸರ್ಕಾರಿ ಮಾದರಿ ಶಾಲೆಯ ಕಾರ್ಯ ವೈಖರಿ ತುಂಬಾ ಶ್ಲಾಘನೀಯ ಎಂದರು,

ಗ್ರಾಮ ಪಂಚಾಯತ ಅಧ್ಯಕ್ಷೆ ಗಾಯತ್ರಿ ಬಾಗೇವಾಡಿ ಹಾಗೂ ಜನಪ್ರತಿನಿಧಿಗಳು ಸಸಿಗೆ ನೀರೆರೆಯುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ಪ್ರಧಾನ ಗುರು ಎ. ವ್ಹಿ. ಗಿರೆಣ್ಣವರ ವಹಿಸಿದ್ದರು.

ಇದೇ ಸಂದರ್ಭದಲ್ಲಿ ಕಾರ್ಯಕ್ರಮಕ್ಕೆ ಸಹಾಯ ನೀಡಿದ ಶಿಕ್ಷಕರಾದ ಪುಷ್ಪಾ ಭರಮಧೆ, ದೇಶಪಾಂಡೆ, ಎಸ್.ಎಸ್. ನಾಯಕವಾಡಿ, ಬಿ.ಆರ್.ಪಿ ಎಮ್.ಕೆ, ಕಮ್ಮಾರ ಅವರನ್ನು ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಉಪಾಧ್ಯಕ್ಷೆ ಸುನಂದಾ ಭಜಂತ್ರಿ, ಕುಮಾರ ಮರ್ದಿ, ಭರಮಣ್ಣ ಹರಿಜನ, ಆನಂದ ಉಪ್ಪಾರ ಎಮ್. ಕೆ. ಕಮ್ಮಾರ, ಎಸ್. ಎಸ್. ನಾಯಿಕವಾಡಿ, ಕೆ. ಬಿ. ಮಮದಾಪೂರ, ಬಸವಪ್ರಭು ಹಾದಿಮನಿ, ಸದಾಶಿವ ಬಸಲಿಂಗಗೋಳ, ದೀಪಾ ದಂಡಿಗಿದಾಸರ, ಕಲ್ಲೋಳಿ ಕ್ಲಸ್ಟರ್ ಎಲ್ಲ ಸರ್ಕಾರಿ ಶಾಲೆಗಳ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಪ್ರಶಸ್ತಿ ಪ್ರಧಾನ ಸಮಾರಂಭ




**ಲೋಕಾಪುರ :** ಬಾಗಲಕೋಟೆ ನವನಗರದ ಕಲಾಭವನದಲ್ಲಿ ಕರ್ನಾಟಕ ಬಯಲಾಟ ಆಕಾಡೆಮಿ ವತಿಯಿಂದ ಹಮ್ಮಿಕೊಂಡ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಪಾರಿಜಾತ ಹಾರ್ಮೋನಿಯಂ ಕಲಾವಿದ ನಾರಾಯಣ ಪತ್ತಾರ ಗೌರವ ಪ್ರಶಸ್ತಿ, ಕೃಷ್ಣಪ್ಪ ಪೂಜಾರಿ ವಾರ್ಷಿಕ ಪ್ರಶಸ್ತಿ ಹಾಗೂ ಕಲಾವಿದ ಗ್ಯಾನಪ್ಪ ಮಾದರ ಅವರಿಗೆ ವಾರ್ಷಿಕ ಪ್ರಶಸ್ತಿ ನೀಡಿ ಗೌರವಿಸಿದರು.

ಕರ್ನಾಟಕ ಬಯಲಾಟ ಅಕಾಡೆಮಿ ಅದ್ಯಕ್ಷ ಪ್ರೋ. ಕೆ.ಆರ್. ದುರ್ಗಾದಾಸ, ಅಕಾಡೆಮಿ ರಜಿಸ್ಟಾರ್ ಕರ್ಣಕುಮಾರ ಜೈನಾಪೂರ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಮಲ್ಲಿಕಾರ್ಜುನ ಮುದಕವಿ, ಪತ್ರಕರ್ತ ಸಲೀಮ ಕೊಪ್ಪದ, ಕೃಷ್ಣಾ ಭಜಂತ್ರಿ, ಲೋಕಣ್ಣ ಭಜಂತ್ರಿ, ಕನಸಗೇರಿ, ಚಿತ್ರಭಾನುಕೋಟಿ ಗ್ರಾಮದ ಗ್ರಾಮಸ್ಥರು, ಕಲಾವಿದರು ಇದ್ದರು.

## ಪದ್ಮಶ್ರೀ ಪ್ರಶಸ್ತಿ ವಿಜೇತ ವೆಂಕಪ್ಪ ಸುಕ್ತೇಕರ ಸನ್ಮಾನ



**ಬಾದಾಮಿ :** ಈಚೆಗೆ ಪದ್ಮಶ್ರೀ ಪ್ರಶಸ್ತಿ ವಿಜೇತ ಬಾಗಲಕೋಟೆ ನಗರದ ಕಲಾವಿದ ವೆಂಕಪ್ಪ ಅಂದಾಜು ಸುಕ್ತೇಕರ ಅವರನ್ನು ಅವರ ನಿವಾಸದಲ್ಲಿ ಶ್ರೀ ಶಿವಶರಣ ಹರಳಯ್ಯ ಸಮಾಜದಿಂದ ಸಮಾಜದ ಅದ್ಯಕ್ಷ ನಾಗರಾಜ ಹ ಹೊಸಮನಿ. ಕಾರ್ಯದರ್ಶಿ ಶ್ರೀಕಾಂತ್ ಸಾನಕ್ಯಾನವರ ಸನ್ಮಾನಿಸಿದರು.
ಈ ಸಂದರ್ಭದಲ್ಲಿ ಸದಸ್ಯರಾದ ಶ್ರೀಮತಿ ಮಾಲಾ ಹೊಸಮನಿ, ರತ್ನಾ ಬಾಯಿ, ವೀಣಾ, ಚೇತನ್, ಸಾಯಿತೇಜ್, ರಿಶಾಂಕ್, ಪ್ರತೀಕ್ಷಾ ಮೊದಲಾದವರು ಹಾಜರಿದ್ದರು.

## 2023-24 ನೇ ಸಾಲಿನ ಮುಂಗಾರು, ಹಿಂಗಾರು ಮತ್ತು ಬೇಸಿಗೆ ಹಂಗಾಮಿನ ಪ್ರಧಾನ ಮಂತ್ರಿ ಫಸಲ್ ಭಿಮಾ(ಬೆಳೆ ವಿಮೆ) ಆಕ್ಷೇಪಣೆ ಆಹ್ವಾನ

**ಬಾದಾಮಿ :** 2023-24 ನೇ ಸಾಲಿನ ಮುಂಗಾರು, ಹಿಂಗಾರು ಮತ್ತು ಬೇಸಿಗೆ ಹಂಗಾಮಿನಲ್ಲಿ ಬಾದಾಮಿ ಮತ್ತು ಗುಳೇದಗುಡ್ಡ ತಾಲೂಕಿನ ರೈತರು ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭಿಮಾ ಯೋಜನೆಯಡಿ ತಿರಸ್ಕೃತ ಅರ್ಜಿಗಳಿಗೆ ಆಕ್ಷೇಪಣೆ ಆಹ್ವಾನಿಸಲಾಗಿದೆ.
ಬಾದಾಮಿತಾಲೂಕಿನಿಂದಮುಂಗಾರುಹಂಗಾಮಿನಲ್ಲಿ 164, ಹಿಂಗಾರು ಹಂಗಾಮಿನಲ್ಲಿ 139 ಹಾಗೂ ಬೇಸಿಗೆ ಹಂಗಾಮಿನಲ್ಲಿ 05, ಮತ್ತು ಗುಳೇದಗುಡ್ಡ ತಾಲೂಕಿನಿಂದ ಮುಂಗಾರು ಹಂಗಾಮಿನಲ್ಲಿ 21 ಅರ್ಜಿಗಳು, ಹಿಂಗಾರು ಹಂಗಾಮಿನಲ್ಲಿ 25 ಅರ್ಜಿಗಳು ವಿಮಾ ಸಂಸ್ಥೆಯಿಂದ ತಿರಸ್ಕೃತಗೊಂಡಿವೆ. ಸದರಿ ರೈತರ ವಿವರವನ್ನು ಬಾದಾಮಿ ತಾಲೂಕಿನ ಕೃಷಿ/ತೋಟಗಾರಿಕೆ ಇಲಾಖೆ ಹಾಗೂ ರೈತಸಂಪರ್ಕ ಕೇಂದ್ರ ಬಾದಾಮಿ, ಕುಳಗೇರಿ, ಕೆರೂರ ಮತ್ತು ಗುಳೇದಗುಡ್ಡ ಕಛೇರಿಗಳ ಸೂಚನಾ ಫಲಕಗಳ ಮೇಲೆ ಅಳವಡಿಸಲಾಗಿದೆ.
ಆಕ್ಷೇಪಣೆಗೆ ಸಲ್ಲಿಸಲು ಅಗತ್ಯ ದಾಖಲಾತಿಗಳಾದ 2023-24ನೇ ಸಾಲಿನ ಪಹಣಿ(ಖಖಿಅ) ಪತ್ರಿಕೆಯಲ್ಲಿ ವಿಮೆಗೆನೋಂದಾಯಿಸಿದಬೆಳೆನಮೂದಾಗಿರಬೇಕು, ಬೆಂಬಲಬೆಲೆ ಪ್ರಯೋಜನೆ ಪಡೆದ ರಶೀದಿ, ವಿಮೆಗೆ ನೋಂದಾಯಿತ ಬೆಳೆಯ ಉತ್ಪನ್ನವನ್ನು ಂಕಒಅ ಮಾರುಕಟ್ಟೆಯಲ್ಲಿ ಮಾರಾಟ ಮಾಡಿದ ರಶೀದಿ ಸೇರಿದಂತೆ ಅಗತ್ಯ ದಾಖಲೆಗಳೊಂದಿಗೆ ಆಕ್ಷೇಪಣೆಗಳು ಇದ್ದಲ್ಲಿ ಮರು ಪರಿಶೀಲನೆಗೆ ರೈತರು ಪ್ರಕಟಣೆಯ ದಿನಾಂಕದಿಂದ 15 ದಿನದೊಳಗಾಗಿ ಸೂಕ್ತದಾಖಲಾತಿಗಳೊಂದಿಗೆ ಆಕ್ಷೇಪಣೆಯನ್ನು ಕೃಷಿ/ತೋಟಗಾರಿಕೆ ಇಲಾಖೆಗೆ ಸಲ್ಲಿಸಬೇಕೆಂದು ಸಹಾಯಕ ಕೃಷಿ ನಿರ್ದೇಶಕರು ಅಶೋಕ ತಿರಕನ್ನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪ್ರಾಪ್ತ ಬಾಲಕಿ ಮೇಲೆ ಅತ್ಯಾಚಾರ; ಪೋಕ್ಸೊ ಪ್ರಕರಣದಲ್ಲಿ ಆರೋಪಿಗೆ 20 ವರ್ಷ ಕಾರಾಗೃಹ ಶಿಕ್ಷೆ, 20 ಸಾವಿರ ದಂಡ ವಿಧಿಸಿ ನ್ಯಾಯಾಲಯ ಆದೇಶ

**ಬಾದಾಮಿ :** ಅಪ್ರಾಪ್ತ ಬಾಲಕಿಯ ಮೇಲೆ ಅತ್ಯಾಚಾರ ಮಾಡಿದ ಆರೋಪಿಗೆ 20 ವರ್ಷ ಜೈಲು ಶಿಕ್ಷೆ ಮತ್ತು 20 ಸಾವಿರ ದಂಡ ವಿಧಿಸಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಫೆ.6 ರಂದು ತೀರ್ಪು ನೀಡಿ ಆದೇಶ ಹೊರಡಿಸಿದೆ.
ತಾಲೂಕಿನ ಗಿಡ್ಡನಾಯಕನಾಳ ಗ್ರಾಮದ ಆರೋಪಿ ಸಂತೋಷ ರಮೇಶ ಲಮಾಣಿ ಈತ ಕಳೆದ 6 ತಿಂಗಳ ಹಿಂದೆ ಅದೇ ಗ್ರಾಮದ ಅಪ್ರಾಪ್ತ ಬಾಲಕಿ ಅಂಗಡಿಗೆ ಹೋದಾಗ ಮನೆಗೆ ಕರೆದುಕೊಂಡು ಹೋಗಿ ಮದುವೆ ಆಗುತ್ತೇನೆ ಎಂದು ಹೇಳಿ ನಂಬಿಸಿ ಮನೆಗೆ ಕರೆದುಕೊಂಡು ಹೋಗಿ ಒತ್ತಾಯಪೂರ್ವಕವಾಗಿ ಅತ್ಯಾಚಾರ ಮಾಡಿ ಗರ್ಭಿಣಿ ಮಾಡಿದ್ದನು. ಪ್ರಕರಣವನ್ನು ಸುದೀರ್ಘ ವಿಚಾರಣೆ ನಡೆಸಿದ ನ್ಯಾಯಾಲಯ ಆರೋಪಿಗೆ ಪೋಕ್ಸೊ ಕಾಯ್ದೆಯಡಿ 20 ವರ್ಷ ಕಠಿಣ ಕಾರಾಗೃಹ ಶಿಕ್ಷೆ, 20 ಸಾವಿರ ದಂಡ ವಿಧಿಸಿದೆ. ಬಾಲಕಿಗೆ ರೂ.4 ಲಕ್ಷ ಪರಿಹಾರ ಹಣ ನೀಡಲು ಸೂಚಿಸಿದೆ. ಸರಕಾರದ ಪರವಾಗಿ ಸರಕಾರಿ ಅಭಿಯೋಜಕ ಎಸ್.ಆರ್.ಹೊಸಮಠ ವಾದ ಮಂಡಿಸಿದ್ದರು.

# ಕಾಯಕ ಬಂಧುಗಳ ತರಬೇತಿ ಕಾರ್ಯಾಗಾರ

## ಅಕುಶಲ ಕಾರ್ಮಿಕರಿಗೆ ಯೋಜನೆ ಬಗ್ಗೆ ಅರಿವು ಮೂಡಿಸಿ: ಡಾ. ಪುನೀತ್

**ಬಾದಾಮಿ :** ಕಾಯಕ ಬಂಧುಗಳು ನಾಯಕತ್ವಗುಣ ಲಕ್ಷಣಗಳನ್ನು ಬೆಳೆಸಿಕೊಳ್ಳಬೇಕು ಮತ್ತು ಅಕುಶಲ ಕಾರ್ಮಿಕರಿಗೆ ಈ ಯೋಜನೆ ಬಗ್ಗೆ ಅರಿವು ಮೂಡಿಸಿ ದುಡಿಯುವ ಕೈಗಳಿಗೆ ಕೆಲಸ ಹೊಂದಲು ಪ್ರೇರೆಪಿಸಬೇಕು ಕೆರೆಅಭಿವೃದ್ಧಿ ವೈಜ್ಞಾನಿಕವಾಗಿ ಹೂಳೆತ್ತುವ ಮುಖೇನ ಗುಣಮಟ್ಟದ ಆಸ್ತಿಗಳ ಸೃಜಿಸಬೇಕೆಂದರು ಎಂದು ಜಿ.ಪಂ.ಯೋಜನಾಧಿಕಾರಿ ಡಾ.ಪುನೀತ್ ಬಿ.ಆರ್.ಹೇಳಿದರು.
ಅವರು ನಗರದ ತಾ.ಪಂ.ಸಭಾಭವನದಲ್ಲಿ ಸೋಮವಾರ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಬೆಂಗಳೂರು,ಅಬ್ದುಲ್‌ನಜೀರ್‌ಸಾಬ್‌ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್‌ತರಬೇತಿ ಸಂಸ್ಥೆ, ಮೈಸೂರು ಹಾಗೂ ಗ್ರಾಮ ಸ್ವರಾಜ್‌ಅಭಿಯಾನ - ಕರ್ನಾಟಕ (ನಾಗರಿಕ ಸಮಾಜದ ಸಂಸ್ಥೆಗಳ ಒಕ್ಕೂಟ) ಹಾಗೂ ತಾಲೂಕು ಪಂಚಾಯತ, ರೀಚ್ ಸಂಸ್ಥೆ ಬಾಗಲಕೋಟೆ ಇವರ ಸಂಯುಕ್ತಾಶ್ರಯದಲ್ಲಿ ನರೇಗಾ ಯೋಜನೆಯ ಕಾಯಕ ಬಂಧುಗಳ 6 ನೇ ತಂಡದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು. ಅಳತೆಗೆ ತಕ್ಕಂತೆ ಕೂಲಿ ಇದ್ದು ಅಳತೆ ಬಗ್ಗೆ ಸರಿಯಾಗಿ ಮಾಹಿತಿ ಹೊಂದಿ ಕೂಲಿ ಕಾರ್ಮಿಕರಿಗೆ ಮಾಹಿತಿ ನೀಡಬೇಕು. ನರೇಗಾಕಾಯ್ದೆಅಡಿಯಲ್ಲಿ 2023-2024ನೇ ಸಾಲಿನಲ್ಲಿಅತ್ಯಧಿಕ ಮಾನವ ದಿನಗಳನ್ನು ಸೃಜನೆಯಾಗಿದ್ದರಿಂದ ಬಾಗಲಕೋಟೆಉತ್ತಮ ಜಿಲ್ಲಾ ಪಂಚಾಯತ ಪ್ರಶಸ್ತಿ ಲಭಿಸಿದೆಂದು ತಿಳಿಸಿದರು.
ತಾ,ಪಂ.ಇಒ ಸುರೇಶ ಕೊಕರೆ ಮಾತನಾಡಿ ಕಾಯಕ ಬಂಧುಗಳು ಯೋಜನೆ ಪಾಲುದಾರರಾಗಿದ್ದು, ಯೋಜನೆಯ ಇನ್ನಷ್ಟು ಪರಿಣಾಣಕಾರಿಯಾಗಿ ಅನುಷ್ಠಾನಗೊಳಿಸಲು ತರಬೇತಿ ನೀಡಲಾಗುತ್ತಿದೆ. ಉದ್ಯೋಗಚೀಟಿ ಹೊಂದಿದ ಎಲ್ಲ ಕೂಲಿಕಾರರಿಗೆ ಕೆಲಸಕ್ಕೆ ಕೊಡಿಸಲು ಪ್ರೇರೆಪಿಸಬೇಕೆಂದರು. ಕಾಯಕ ಬಂಧುಗಳು ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ಸರಿಯಾಗಿ ನಿರ್ವಹಿಸಿದ್ದಲ್ಲಿ ಈ ಯೋಜನೆಯನ್ನು ಯಶಸ್ವಿಗೊಳಿಸಬಹುದಾಗಿದ್ದುತರಬೇತಿಯ ಲಾಭ ಹೊಂದಬೇಕೆಂದರು. ತರಬೇತಿಯಲ್ಲಿ ತಿಳಿಸುವ ಪ್ರತಿಯೊಂದು ವಿಷಯಗಳನ್ನು ಮನನ ಮಾಡಿಕೊಂಡು ಕ್ಷೇತ್ರಕಾರ್ಯದಲ್ಲಿ ಅಳವಡಿಸಿಕೊಳ್ಳಬೇಕೆಂದರು.
ಈ ಕಾರ್ಯಕ್ರಮದಲ್ಲಿ ಮಂಗಳೂರು, ಕಿತ್ತಲಿ, ಕೈನಕಟ್ಟಿ, ಮಂಗಳೂರು ಗ್ರಾಮ ಪಂಚಾಯಿತಿಯ 40 ಕಾಯಕ ಬಂದುಗಳು ಭಾಗವಹಿಸಿದ್ದರು.
ಸಂಪನ್ಮೂಲ ವ್ಯಕ್ತಿಗಳಾದ ಸಮೀರ್, ರೇಖಾ, ಪವಿತ್ರಾ , ಮೀನಾಕ್ಷಿ, ವಿಠ್ಠಲ, ಗೋಪಾಲ್‌ಉಪಸ್ಥಿತರಿದ್ದರು.




## ಮುಷ್ಕರಕ್ಕೆ ಸರ್ಕಾರಿ ನೌಕರರ ಬೆಂಬಲ



**ಗುಳೇದಗುಡ್ಡ:** ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಗ್ರಾಮ ಆಡಳಿತದ ಅಧಿಕಾರಿಗಳು ನಡೆಸುತ್ತಿರುವ ಅನಿರ್ದಿಷ್ಠಾವಧಿ ಮುಷ್ಕರಕ್ಕೆ ಗುಳೇದಗುಡ್ಡ ಸರಕಾರಿ ನೌಕರರ ಸಂಘದ ಪದಾಧಿಕಾರಿಗಳು ಬೆಂಬಲ ವ್ಯಕ್ತಪಡಿಸಿದ್ದಾರೆ. ಪಟ್ಟಣದ ತಹಶೀಲ್ದಾರ ಕಚೇರಿ ಆವರಣದಲ್ಲಿ ಹಮ್ಮಿಕೊಂಡಿರುವ ಈ ಮುಷ್ಕರ ಸ್ಥಳಕ್ಕೆ ಭೇಟಿ ನೀಡಿ ಸಂಘದ ಅಧ್ಯಕ್ಷ ಪಿ.ವಿ.ಜಾಧವ ಅವರು ಮಾತನಾಡಿ, ಈ ಹಿಂದೆ ರಾಜ್ಯವ್ಯಾಪಿ ಮುಷ್ಕರ ನಡೆಸಿದಾಗ ಕಂದಾಯ ಇಲಾಖೆ ಅಧಿಕಾರಿಗಳು ಸಮಸ್ಯೆ ಈಡೇರಿಸುವ ಭರವಸೆ ನೀಡಿದ್ದರು. ಆದರೆ ಅದು ಕಾರ್ಯ ರೂಪಕ್ಕೆ ಬಂದಿಲ್ಲ. ಅದಕ್ಕಾಗಿ ಗ್ರಾಮ ಆಡಳಿತದವರು ಮತ್ತೆ ಮುಷ್ಕರ ಕೈಗೊಳ್ಳಬೇಕಾಗಿದೆ. ಸರಕಾರ ಈಗಲಾದರೂ ಗ್ರಾಮ ಆಡಳಿತ ಅಧಿಕಾರಿಗಳ ವಿವಿಧ ಬೇಡಿಕೆಗಳ ಈಡೇರಿಕೆಗೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸರ್ಕಾರಕ್ಕೆ ಒತ್ತಾಯಿಸಿದರು.
ಸಂಘದಕಾರ್ಯದರ್ಶಿನಾಗರಾಜಎಚ್.ಮಾತನಾಡಿ, ಗ್ರಾಮ ಆಡಳಿತ ಅಧಿಕಾರಿಗಳ ವರ್ಗಾವಣೆ, ನೂತನ ಕೇಂದ್ರ ಕಚೇರಿ ಸ್ಥಾಪನೆ, ಗ್ರಾಮ ಆಡಳಿತ ಅಧಿಕಾರಿಗಳ ಮೇಲಿನ ಹಲ್ಲೆ ತಡೆ, ದೌರ್ಜನ್ಯ ಹೀಗೆ ಈ ಎಲ್ಲ ವಿವಿಧ ಬೇಡಿಕೆ ಈಡೇರಿಕೆ ಅಗತ್ಯವಾದ ಕ್ರಮ ಜರುಗಿಸಬೇಕು. ಅದಕ್ಕೆ ಗುಳೇದಗುಡ್ಡ ತಾಲೂಕು ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಸಂಪೂರ್ಣ ಬೆಂಬಲ ಸೂಚಿಸುತ್ತೇವೆ. ಸರ್ಕಾರಕ್ಕೆ ಒತ್ತಾಯಿಸಿ ಬೇಡಿಕೆ ಈಡೇರಿಕೆಗೆ ಆಗ್ರಹಿಸುತ್ತೇವೆ ಎಂದರು.
ಈ ಸಂದರ್ಭದಲ್ಲಿ ಗುಳೇದಗುಡ್ಡ ಸರ್ಕಾರಿ ನೌಕರರ ಸಂಘದ ಖಜಾಂಚಿ ಆರ್.ಎಂ.ಕೋತವಾಲ್, ನಿರ್ದೇಶಕರಾದ ಎಸ್.ಎಚ್.ಜೋಗಿನ, ಪ್ರಶಾಂತ ಹೊನ್ನಳ್ಳಿ, ಸಿದ್ದು ಕೊರವರ, ಎಂ.ಎಸ್.ಹಿರೇಮಠ ಇತರರು ಮುಷ್ಕರಕ್ಕೆ ಬೆಂಬಲ ಸೂಚಿಸುವ ಸಂದರ್ಭದಲ್ಲಿ ಇದ್ದರು.

## ಫಸಲ್ ಬಿಮಾ ಯೋಜನೆ: ಆಕ್ಷೇಪಣೆಗೆ ಅರ್ಜಿ

**ಬಾಗಲಕೋಟೆ :** ಪ್ರಸಕ್ತ ಸಾಲಿನ ಮುಂಗಾರು, ಹಿಂಗಾರು ಮತ್ತು ಬೇಸಿಗೆ ಹಂಗಾಮಿನ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ತಿರಸ್ಕೃತ ಅರ್ಜಿಗಳಿಗೆ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ.
ಬಾಗಲಕೋಟೆ ತಾಲೂಕಿನ 2023-24 ನೇ ಸಾಲಿನ ಮುಂಗಾರು ಹಂಗಾಮಿನ-101, ಹಿಂಗಾರು ಹಂಗಾಮಿನ-170 ಮತ್ತು ಬೇಸಿಗೆ ಹಂಗಾಮಿನ-03 ಒಟ್ಟು 274 ಪ್ರಸ್ತಾವನೆಗಳು ವಿಮಾ ಸಂಸ್ಥೆಯಿಂದ ತಿರಸ್ಕೃತವಾಗಿದ್ದು, ಈ ಮಾಹಿತಿಯನ್ನು ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ಕಛೇರಿ ಹಾಗೂ ರೈತ ಸಂಪರ್ಕ ಕೇಂದ್ರಗಳ ಸೂಚನಾ ಫಲಕಗಳ ಮೇಲೆ ಅಳವಡಿಸಲಾಗಿದೆ. ಈ ಕುರಿತು ಆಕ್ಷೇಪಣೆಗಳು ಇದ್ದಲ್ಲಿ ಮರು ಪರಿಶೀಲನೆಗೆ ರೈತರು ಪತ್ರಿಕೆಯಲ್ಲಿ ಪ್ರಕಟಣೆಗೊಂಡ 15 ದಿನಗಳೊಳಗಾಗಿ ಬೆಳೆ ವಿಮೆಗೆ ನೋಂದಣಿಯಾಗಿರುವ ಬೆಳೆಯನ್ನು ಬೆಳೆದಿರುವ ಕುರಿತು, ಅಗತ್ಯ ದಾಖಲಾತಿಯೊಂದಿಗೆ ಆಕ್ಷೇಪಣೆಯನ್ನು ಸಲ್ಲಿಸಲು ಕೋರಲಾಗಿದೆ.
ಆಕ್ಷೇಪಣೆ ಸಲ್ಲಿಸಲು 1. 2023-24 ರ ಪಹಣಿ ಪತ್ರಿಕೆಯಲ್ಲಿ ವಿಮೆಗೆ ನೋಂದಾಯಿಸಿದ ಬೆಳೆ ನಮೂದಾಗಿರಬೇಕು. 2. ಬೆಂಬಲ ಬೆಲೆ ಪ್ರಯೋಜನೆಪಡೆದಿದ್ದಲ್ಲಿ,ರಶೀದಿನೀಡುವುದು.3.ವಿಮೆಗೆನೋಂದಾಯಿತ ಬೆಳೆಯ ಉತ್ಪನ್ನವನ್ನು ಂಕಒಅ ಮಾರುಕಟ್ಟೆಗೆ ಮಾರಾಟ ಮಾಡಿದ್ದಲ್ಲಿ, ರಶೀದಿಯನ್ನು ರೈತ ಸಂಪರ್ಕ ಕೇಂದ್ರ ಅಥವಾ ಕೃಷಿ ಮತ್ತು ತೋಟಗಾಕೆ ಇಲಾಖೆಯಲ್ಲಿ ಆಕ್ಷೇಪಣೆಗಳನ್ನು ಸಲ್ಲಿಸುವಂತೆ ಬಾಗಲಕೋಟೆಯ ಸಹಾಯಕ ಕೃಷಿ ನಿದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಳವ್ವ ಬಾವಲತ್ತಿ ನಿಧನ



**ರಬಕವಿ-ಬನಹಟ್ಟಿ:** ರಾಮಪೂರದ ನಿವಾಸಿ ಕಾಳವ್ವ ಬಾವಲತ್ತಿ(74) ನಿಧನರಾದರು. ಇವರಿಗೆ ಪತಿ, ಮೂವರು ಪುತ್ರರು ಹಾಗು ಪುತ್ರಿಯರು ಸೇರಿದಂತೆ ಅಪಾರ ಬಳಗವಿದೆ.

## ಶರಣರ ತತ್ವಾದರ್ಶಗಳಿಂದ ಉತ್ತಮ ಸಮಾಜ ನಿರ್ಮಾಣ ಸಾಧ್ಯ: ಉದಯಕುಮಾರ

**ಬೆಳಗಾವಿ :** ಉತ್ತಮ ಸಮಾಜ ನಿರ್ಮಾಣಕ್ಕೆ ಶರಣರ ಆದರ್ಶಗಳು ಅಗತ್ಯವಾಗಿವೆ. ಇಂದಿನ ಯುವ ಜನತೆ ಶರಣರ ತತ್ವಾದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವದರ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಮುಂದಾಗುವಂತೆ ಮಹಾನಗರ ಪಾಲಿಕೆ ಉಪ ಆಯುಕ್ತರಾದ ಉದಯಕುಮಾರ ತಳವಾರ ಹೇಳಿದರು.
ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ಸೋಮವಾರ (ಫೆ.10) ನಗರದ ಕುಮಾರ ಗಂಧರ್ವ ಕಲಾ ರಂಗ ಮಂದಿರದಲ್ಲಿಕಾಯಕಶರಣರಾದಮಾದಾರ ಚನ್ನಯ್ಯ, ಮಾದಾರ ಧೂಳಯ್ಯ, ಸಮಗಾರ ಹರಳಯ್ಯ ಹಾಗೂ ಉರಿ ಲಿಂಗಪೆದ್ದಿಯವರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.
ದಾರ್ಶನಿಕರು, ಶರಣರು ಮತ್ತು ಸಂತರ ಜಯಂತಿಗಳನ್ನು ಆಚರಿಸುವುದರ ಮೂಲಕ ಶರಣರ ತತ್ವಾದರ್ಶಗಳನ್ನು ಸಮಾಜಕ್ಕೆ ತಿಳಿಸುವ ಕಾರ್ಯ ಮಾಡಲಾಗುತ್ತಿದೆ. ತಳ ಸಮುದಾಯದ ಅಭ್ಯುಧ್ಯೇಯಕ್ಕಾಗಿ ಇಂದು ಸರಕಾರಗಳು ಅನೇಕ ಯೋಜನೆಗಳನ್ನು ಜಾರಿಗೊಳಿಸವೆ. ಈ ಯೋಜನೆಗಳ ಸದುಪಯೋಗ ಪಡೆದುಕೊಂಡು ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕವಾಗಿ ಸಧೃಡರಾಗಲು ಉದಯಕುಮಾರ ತಳವಾರ ಅವರು ತಿಳಿಸಿದರು.



ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಮ.ನಾ.ರಾ. ಸಂಘದ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ನಿರ್ಮಲಾ ಬಟ್ಟಲ ಅವರು ಮಾತನಾಡಿ 12 ನೇ ಶತಮಾನದಲ್ಲಿ ಚಾತುರ್ವರ್ಣ ವ್ಯವಸ್ಥೆ ಇತ್ತು ಅಂತಹ ವ್ಯವಸ್ಥೆಯನ್ನು ಹೋಗಲಾಡಿಸಿ ಎಲ್ಲರು ಸಮಾನರು ಎಂದು ಬಸವಣ್ಣ ನವರು ಕ್ರಾಂತಿ ಪ್ರಾರಂಭಿಸಿದ್ದರು ಅಂತಹ ಸಂದರ್ಭದಲ್ಲಿ ಕಾಯಕ ಶರಣರಾದ ಮಾದಾರ ಚನ್ನಯ್ಯ, ಮಾದಾರ ಧೂಳಯ್ಯ, ಸಮಗಾರ ಹರಳಯ್ಯ ಹಾಗೂ ಉರಿಲಿಂಗಪೆದ್ದಿ ಅಂತಹ ಕ್ರಾಂತಿಯಲ್ಲಿ ಗುರುತಿಸಿಕೊಂಡ ಶರಣರು ಇವರಾಗಿದ್ದರು ಎಂದರು.
ಶರಣ ಮಾದಾರ ಧೂಳಯ್ಯನವರು ಶಿವನು ವಲಿದು ಬಂದಾಗ ಶಿವನಿಗೆ ನಿನ್ನನ್ನು ಯಾರು ಬೇಡಿಕೊಳ್ಳುತ್ತಾರೊ ಅವರ ಹತ್ತಿರ ಹೋಗು ನಾನು ಕಾಯಕದಲ್ಲಿ ಕಾರ್ಯನಿರತನಾಗಿದ್ದೇನೆ ನನಗೆ ಸಮಯವಿಲ್ಲಾ ಎಂದು ಗಟ್ಟಿ ಧೈರ್ಯದಿಂದ ಹೇಳಿ ತಮ್ಮ ಕಾಯಕದ ಮಹತ್ವವನ್ನು ತಿಳಿಸಿಕೊಟ್ಟ ಶರಣರಾಗಿದ್ದಾರೆ. ಶರಣ ಡೋಹರ ಕಕ್ಕಯ್ಯನವರು ವರ್ಗ ರಹಿತ, ಜಾತಿ ರಹಿತ ಸಮಾಜದ ಸಲುವಾಗಿ ಹೋರಾಡಿದವರು. ವಚನ ಕಟ್ಟೆಗಳನ್ನು ಉಳಿಸಿಕೊಡುವದರಲ್ಲಿ ಈ ಶರಣರ ಪಾತ್ರ ತುಂಬಾ ಮುಖ್ಯವಾಗಿದೆ. ಅದರಂತೆ ಶರಣ ಉರಿಲಿಂಗಪೆದ್ದಿಯವರು ಉರಿಲಿಂಗದೇವನ ಮಠದಿಂದ ಲಿಂಗ ದೀಕ್ಷೆ ಪಡೆದು ಸಂಸ್ಕೃತ, ಕನ್ನಡ ಭಾಷೆ ಕಲಿತುಕೊಂಡು ವಚನಗಳನ್ನು ಬರೆಯುತ್ತಾ ಕಾಯಕ ನಿಷ್ಠೆಯಿಂದ ಇದ್ದ ಶರಣರು. ಎಂದು ಕಾಯಕ ಶರಣರ ಕುರಿತಾಗಿ ಡಾ. ನಿರ್ಮಲಾ ಬಟ್ಟಲ ಹೇಳಿದರು.
ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಮಹಾನಗರ ಪಾಲಿಕೆಯಉಪಆಯುಕ್ತಉದಯಕುಮಾರ ತಳವಾರ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಮಲ್ಲೇಶ ಚೌಗಲೆ, ಭೀಮರಾವ ಪವಾರ, ವಿವೇಕ ಶೇರಖಾನೆ, ಯೋಗೇಶ ಮಾವರಕರ, ಹಾಗೂ ಸಮಾಜದ ಗಣ್ಯ ಮಾನ್ಯರು ಉಪಸ್ಥಿತರಿದ್ದರು.

## ವಿಧಾನಸೌಧ ಆವರಣದಲ್ಲಿ ಪುಸ್ತಕ ಮೇಳ

## ಪುಸ್ತಕ ಮೇಳದಲ್ಲಿ ಭಾಗವಹಿಸಲು ನಾಡಿನ ಪ್ರಕಾಶಕರು/ ಮಾರಾಟಗಾರರಿಂದ ಅರ್ಜಿ ಆಹ್ವಾನ

**ಬೆಳಗಾವಿ :** ಕರ್ನಾಟಕ ವಿಧಾನ ಸಭೆ ಸಚಿವಾಲಯದಿಂದ ಪ್ರಥಮ ಬಾರಿಗೆ ನಾಡಿನ ಜನತೆಗೆ ಅತೀ ಅಮೂಲ್ಯವಾದ ಪುಸ್ತಕಗಳನ್ನು ವೀಕ್ಷಿಸಲು ಮತ್ತು ಖರೀದಿಸಲು ಕರ್ನಾಟಕ ವಿಧಾನ ಸಭಾ ಸಚಿವಾಲಯದ ವತಿಯಿಂದ ಫೆಬ್ರವರಿ 27 ರಿಂದ ಮಾರ್ಚ್ 3 ರ ವರೆಗೆ *ವಿಧಾನಸೌಧದ ಆವರಣದಲ್ಲಿ ಪುಸ್ತಕ ಮೇಳ* ವನ್ನು ಹಮ್ಮಿಕೊಳ್ಳಲಾಗಿದೆ.
ಈ ಪುಸ್ತಕ ಮೇಳದಲ್ಲಿ ಭಾಗವಹಿಸಲು ಇಚ್ಛಿಸುವ ನಾಡಿನ ಪ್ರಕಾಶಕರು / ಮಾರಾಟಗರಾರು ನಿಗದಿತ ಅರ್ಜಿ ನಮೂನೆಯನ್ನು *ಮುಖ್ಯ ಗ್ರಂಥಪಾಲಕರು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು*, ಇವರಿಂದ ಅಥವಾ ವಿಧಾನ ಸಭೆ ಸಚಿವಾಲಯದ *ವೆಬ್ ಸೈಟ್ www.kla.kar.nic.in* ನಲ್ಲಿ ಉಚಿತವಾಗಿ ಪಡೆದುಕೊಳ್ಳಬಹುದಾಗಿದೆ.
ಮೇಳದಲ್ಲಿ ಭಾಗವಹಿಸುವ ಪ್ರಕಾಶಕರು/ ಮಾರಾಟಗಾರರು ಮಳಿಗೆಯೊಂದಕ್ಕೆ *ರೂ.1,000/-ಗಳ ಭದ್ರತಾ ಠೇವಣಿ ಡಿ.ಡಿ* ಯನ್ನು ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು ಇವರ ಹೆಸರಿನಲ್ಲಿ ಸಲ್ಲಿಸುವುದು.
ಭರ್ತಿ ಮಾಡಿದ ಅರ್ಜಿಯನ್ನು ಡಿ.ಡಿ.ಯೊಂದಿಗೆ ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ ಸಚಿವಾಲಯ, ವಿಧಾನಸೌಧ, ಬೆಂಗಳೂರು ಇವರಿಗೆ ಸಲ್ಲಿಸಬಹುದು ಎಂದು ಕರ್ನಾಟಕ ವಿಧಾನಸಭೆಯ ಕಾರ್ಯದರ್ಶಿಗಳಾದ ಶ್ರೀಮತಿ ಎಂ.ಕೆ.ವಿಶಾಲಾಕ್ಷಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪುನರ್ವಸತಿ ಕಾರ್ಯಕರ್ತರ (ವ್ಹಿ.ಆರ್.ಡಬ್ಲ್ಯೂ) ಹುದ್ದೆಗೆ ಅರ್ಜಿ ಆಹ್ವಾನ

**ಬೆಳಗಾವಿ :** ಕಿತ್ತೂರು ತಾಲೂಕಿನ ವೀರಾಪುರ ಗ್ರಾಮ ಪಂಚಾಯತಿಯಲ್ಲಿ ಖಾಲಿ ಇರುವ ಒಂದು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ (ವ್ಹಿ.ಆರ್.ಡಬ್ಲ್ಯೂ) ಹುದ್ದೆಗೆ ಮಾಸಿಕ ರೂ.9000/- ಗಳ ಗೌರವಧನದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.
ಕಿತ್ತೂರು ತಾಲೂಕಿನ ವೀರಾಪುರ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಅರ್ಹ ವಿಕಲಚೇತನ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಆಸಕ್ತ ಅಭ್ಯರ್ಥಿಗಳುದಿನಾಂಕ:10-03-2025ರಸಂಜೆ5:00 ಗಂಟೆಯೊಳಗಾಗಿಕಾರ್ಯನಿರ್ವಾಹಕಅಧಿಕಾರಿಗಳು ಹಾಗೂ ತಾಲೂಕು ಪಂಚಾಯತ ಕಾರ್ಯಾಲಯ ಕಿತ್ತೂರು ಇವರಿಗೆ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಅರ್ಜಿ ಹಾಗೂ ಹೆಚ್ಚಿನಮಾಹಿತಿಗಾಗಿಬೈಲಹೊಂಗಲತಾಲೂಕಿನಎಂ. ಆರ್.ಡಬ್ಲ್ಯೂ ಇವರನ್ನು ( ಮೊ, ಸಂ: 8105059581) ಸಂಪರ್ಕಿಸಬಹುದಾಗಿದೆಎಂದು ಜಿಲ್ಲಾಅಂಗವಿಕಲರ ಕಲ್ಯಾಣಾಧಿಕಾಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬೆಳಗಾವಿ : ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ಜಿಟಿಟಿಸಿ ಸಭಾ ಭವನದಲ್ಲಿ ಬೆಳಗಾವಿ ನಗರದ ಫ್ರೌಡಶಾಲೆಗಳ ವೃತ್ತಿ ಮಾರ್ಗದರ್ಶನ ಮತ್ತು ಎಸ್.ಎಸ್.ಎಲ್.ಸಿ ತರಗತಿಯ ವಿದ್ಯಾರ್ಥಿಗಳಿಗೆ ರಸ ಪ್ರಶ್ನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಜಿಟಿಟಿಸಿ ಪ್ರಾಂಶುಪಾಲರಾದ ರಾಜಕುಮಾರ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಸಮನ್ವಯ ಅಧಿಕಾರಿ ಬಿ.ಜಿ ಮೊಗೇರ, ಉಪನ್ಯಾಸಕರಾದ ರಮಾಕಾಂತ ಮಠ, ಅರವಿಂದ ಖಡೇದ ಮುಂತಾದವರು ಉಪಸ್ಥಿತರಿದ್ದರು. ತದನಂತರ ರಸಪ್ರಶ್ನೆ ವಿಜೇತ ವಿಧ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು. ಇದೇ ಸಂದರ್ಭದಲ್ಲಿ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ಮುಖ್ಯ ಉದ್ದೇಶದ ಕುರಿತು ಶಾಲಾ ವಿಧ್ಯಾರ್ಥಿಗಳಿಗೆ ಮಾಹಿತಿ ನೀಡಲಾಯಿತು.

## ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನಕ ತಿರುಪತಿ, ಧರ್ಮಸ್ಥಳ ಮಾದರಿಯಲ್ಲಿ ಅಭಿವೃದ್ಧಿಗೆ ಯೋಜನೆ: ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್

**ಬೆಳಗಾವಿ :** ಸವದತ್ತಿಯ ಶ್ರೀ ಕ್ಷೇತ್ರ ರೇಣುಕಾ ಯಲ್ಲಮ್ಮ ದೇವಿಯ ಜಾತ್ರೆಗೆ ಭರತ ಹುಣ್ಣಿಮೆ ನಿಮಿತ್ಯ ದೇವಿ ದರ್ಶನಕ್ಕೆ ಆಗಮಿಸುವ ಭಕ್ತಾದಿಗಳಿಗೆ ಪ್ರಾಧಿಕಾರದ ವತಿಯಂದ ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡಲಾಗಿದೆ. ಒಂದೇ ದಿನದಲ್ಲಿ ಸರಿಸುಮಾರು 10 ಲಕ್ಷ ಜನರು ದೇವಸ್ಥಾನಕ್ಕೆ ಆಗಮಿಸಿ ದರ್ಶನ ಪಡೆಯುತ್ತಿದ್ದಾರೆ. ಭಕ್ತಾದಿಗಳಿಗೆ ತೊಂದರೆಯಾಗದಂತೆ ಪ್ರವೇಶ ಮತ್ತು ನಿರ್ಗಮನಕ್ಕೆ ಪ್ರತ್ಯೇಕ ರಸ್ತೆಗಳನ್ನು ಮಾರ್ಪಡಿಸಿ ಟ್ರಾಫಿಕ್ ನಿಯಂತ್ರಣ ಮಾಡಲಾಗುತ್ತಿದೆ ಎಂದುಜಿಲ್ಲಾಧಿಕಾರಿಮೊಹಮ್ಮದ್ ರೋಷನ್ ತಿಳಿಸಿದರು.
ಸವದತ್ತಿಯಶ್ರೀರೇಣುಕಾಯಲ್ಲಮ್ಮ ದೇವಸ್ಥಾನಕ್ಕೆ ಬುಧವಾರ (ಫೆ.12) ಭೇಟಿ ನೀಡಿ, ಅಲ್ಲಿನ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿ ಬಳಿಕ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.
ಚಕ್ಕಡಿ ಗಡಿ, ಜೀಪ್, ಟೆಂಪೋ, ಟ್ರ್ಯಾಕ್ಟರ್, ಬೈಕ್, ಕಾರ್, ಬಸ್ ಸೇರಿದಂತೆ ಎಲ್ಲ ವಾಹನಗಳಿಗೆ ಪ್ರತ್ಯೇಕ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲಾಗಿದೆ. ಸರಿಸುಮಾರು 1500ಪೊಲೀಸ್‌ಹಾಗೂಗೃಹರಕ್ಷಕ ಸಿಬ್ಬಂದಿಗಳನ್ನು ನೇಮಿಸಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರು, ಪ್ರವಾಸೋದ್ಯಮ ಸಚಿವರು, ಪ್ರವಾಸೋದ್ಯಮ ಮಂಡಳಿ ಅಧ್ಯಕರು, ಈ ಭಾಗದ ಶಾಸಕರ ಸಲಹೆಯಂತೆವಿವಿಧಭಾಗಗಳಿಂದ ಆಗಮಿಸುವ ಸಾರ್ವಜನಿಕರಿಗೆ ವ್ಯವಸ್ಥೆ ಮಾಡಲಾಗಿದೆ ಎಂದರು.
ಇದಲ್ಲದೇ ಮೊದಲ ಬಾರಿಗೆ ಮಂಡಳಿ ಹಾಗೂ ಪ್ರಾಧಿಕಾರದ ವತಿಯಿಂದ ಭಕ್ತಾಧಿಗಳಿಗಾಗಿ ಮಜ್ಜಿಗೆದಾಸೋಹಮಾಡಲಾಗಿದೆ. ಮುಂದಿನ ವರ್ಷದಲ್ಲಿ ದಾಸೋಹ ಭವನ ಮಾಡಬೇಕು ಎಂದು ಯೋಜನೆ ರೂಪಿಸಲಾಗಿದೆ. ತಿರುಪತಿ ಧರ್ಮಸ್ಥಳದ ಮಾದರಿಯಲ್ಲಿ ವ್ಯವಸ್ಥೆ ಕಲ್ಪಿಸಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಈಗಾಗಲೇಅನುದಾನಲಭ್ಯವಿದ್ದು, ಟೆಂಡರ್‌ಪ್ರಕ್ರಿಯೆಪೂರ್ಣಗೊಂಡ ಬಳಿಕ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು.




ದನಕರುಗಳಿಗೆ ಮೇವು ಕೊರತೆಯಾಗದಂತೆ ನೋಡಿಕೊಳ್ಳಲಾಗುತ್ತಿದೆ.
ಪಾರ್ಕಿಂಗ್‌ಮತ್ತುಟ್ರಾಫಿಕ್‌ಮೂಲ ಸಮಸ್ಯೆಯಾಗಿತ್ತು. ಚಕ್ಕಡಿ ಗಾಡಿ ಹಾಗೂ ವಾಹನಗಳಿಗೆ ಪ್ರತ್ಯೇಕ ಪಾರ್ಕಿಂಗ್ ಮಾಡಲಾಗಿದೆ.
ಗುಣಮಟ್ಟದ ವ್ಯವಸ್ಥೆ ಕಲ್ಪಿಸಲು ಪ್ರಾಧಿಕಾರ ಹಾಗೂ ಪ್ರವಾಸೋದ್ಯಮ ಮಂಡಳಿಯಿಂದ ಯೋಜನೆ ಸಿದ್ಧಗೊಳ್ಳುತ್ತಿದೆ. ಜೋಗುಳಬಾವಿ, ಉಗರಗೋಳ ಹಾಗೂ ಸವದತ್ತಿ ರಸ್ತೆಯಿಂದ ಬರುವ ವಾಹನಗಳಿಗೆ ನೇರವಾಗಿ ಪಾರ್ಕಿಂಗ್ ಹೋಗಲು ರಸ್ತೆಗಳನ್ನು ಗುರುತಿಸಲಾಗಿದೆ. ಇದರಿಂದ ಟ್ರಾಫಿಕ್ ನಿಯಂತ್ರಣಕ್ಕೆ ಸಹಾಯವಾಗುತ್ತಿದೆ ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಹೇಳಿದರು.
ವಿವಿಧ ಭಾಗಗಳಿಂದ ಬರುವ ಭಕ್ತರಿಗೆ ಮುಖ್ಯವಾಗಿ ಪಾರ್ಕಿಂಗ್, ಲೈಟಿಂಗ್ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿದೆ. ದೇವಸ್ಥಾನದ ಸುತ್ತ ಮುತ್ತಲಿನ ರಸ್ತೆಗಳಲ್ಲಿ ಸಾರ್ವಜನಿಕರು ವಾಹನಗಳನ್ನು ಪಾರ್ಕ್ ಮಾಡಿದಾಗ ಟ್ರಾಫಿಕ್ ಸಮಸ್ಯೆಯಾಗುತ್ತಿದೆ ಅದಕ್ಕೆ 15 ಟೋಯಿಂಗ್‌ವಾಹನಗಳಮೂಲಕ ಪಾರ್ಕ್ ಮಾಡಿದ ವಾಹನಗಳನ್ನು ಸ್ಥಳಾಂತರಿಸಲಾಗುತ್ತಿದೆ.
ದೇವಸ್ಥಾನದ ಬದಿಯ ರಸ್ತೆಗಳಲ್ಲಿ ಕೂಡ ಯಾವುದೇ ವಾಹನಗಳ ಪಾರ್ಕಿಂಗ್ ಅವಕಾಶ ಕೊಟ್ಟಿಲ್ಲ. ರಸ್ತೆಗಳ ಮೇಲಿರುವ ಅಂಗಡಿಗಳನ್ನು ತೆರವುಗೊಳಿಸಲಾಗಿದೆ.
ಇದರಿಂದ ದೇವಸ್ಥಾನದ ಸುತ್ತ ಮುತ್ತ ಒಳ್ಳೆಯ ಸ್ವಚ್ಛ ವಾತಾವರಣ ನಿರ್ಮಾಣವಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಗುಳೇದ ಅವರು ತಿಳಿಸಿದರು.

# ಪ್ರಾಥಮಿಕ ಹಂತದ ಶಿಕ್ಷಣದಲ್ಲಿಯೇ ಸಹಕಾರಿ ಆಂದೋಲನದ ಮಾಹಿತಿ ತಿಳಿಸಬೇಕು: ಸಹಕಾರ ಸಚಿವ ಕೆ.ಎನ್.ರಾಜಣ್ಣ

**ಕೊಪ್ಪಳ :** ಸಹಕಾರಿ ಕ್ಷೇತ್ರದಲ್ಲಿ ಯುವ ಸಮುದಾಯದ ಮುಂದೆ ಬರುತ್ತಿಲ್ಲ, ಪ್ರಾಥಮಿಕ ಹಂತದ ಶಿಕ್ಷಣ ವ್ಯವಸ್ಥೆಯಲ್ಲಿಯೇ ಸಹಕಾರಿ ಆಂದೋಲನಗಳ ಮಾಹಿತಿ ತಿಳಿಸುವಂತಾಗಬೇಕು ಎಂದು ಕರ್ನಾಟಕ ಸರ್ಕಾರದ ಸಹಕಾರ ಸಚಿವರಾದ ಕೆ.ಎನ್. ರಾಜಣ್ಣ ಹೇಳಿದರು.

ಅವರು ಕುಕನೂರಿನ ಎ.ಪಿ.ಎಂ.ಸಿ ಆವರಣದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳಿ ಬೆಂಗಳೂರು, ರಾಯಚೂರು, ಬಳ್ಳಾರಿ, ಕೊಪ್ಪಳ ಹಾಗೂ ವಿಜಯನಗರ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ, ಕೊಪ್ಪಳ ಜಿಲ್ಲಾ ಸಹಕಾರಿ ಯೂನಿಯನ್, ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್, ಸಹಕಾರ ಇಲಾಖೆ ಹಾಗೂ ಕುಕನೂರು ಮತ್ತು ಯಲಬುರ್ಗಾ ತಾಲ್ಲೂಕಿನ ವಿವಿಧ ಸಹಕಾರಿ ಸಂಘಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ, ಸಹಕಾರ ಜಾಗೃತಿ ಸಮಾವೇಶದಲ್ಲಿ ಸಹಕಾರಿ ಪಿತಾಮಹ ಸಿದ್ದನಗೌಡ ಸಣ್ಣ ರಾಮನಗೌಡ ಪಾಟೀಲ್ ರವರ ಭಾವಚಿತ್ರಕ್ಕೆ ಪುಷ್ಪಾರ್ಚಣೆ ಮಾಡಿ, ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರಪಂಚದಲ್ಲಿ ಪ್ರಪ್ರಥಮವಾಗಿ ಪತ್ತಿನ ವ್ಯವಸ್ಥೆಯನ್ನು ಪ್ರಾರಂಭಿಸಿದ ಹೆಗ್ಗಳಿಕೆ ಸಹಕಾರಿ ಪಿತಾಮಹ ಸಿದ್ದನಗೌಡ ಪಾಟೀಲರದ್ದು, ಈ ಪತ್ತಿನ ಸಂಸ್ಥೆ 1904 ರಲ್ಲಿ ಗದಗ ಜಿಲ್ಲೆಯ ಕಣಗಿನಹಾಳ ಗ್ರಾಮದಲ್ಲಿ ಆರಂಭವಾಯಿತು. ಯುವಕರು,ಮಹಿಳೆಯರುಸಹಕಾರಿಗಳಾಗಲು ಮುಂದೆ ಬರಬೇಕು. ಸಹಕಾರಿ ಆಂದೋಲನ ಯಾವ ರೀತಿ ನಡೆಯುತ್ತದೆ, ಅದನ್ನು ಯಾವ ರೀತಿ ನಡೆಸಿಕೊಂಡು ಹೋಗಬೇಕು ಹಾಗೂ ಅದರಿಂದ ರೈತರಿಗೆ ಏನೆಲ್ಲಾ ಅನುಕೂಲವಾಗುತ್ತದೆ ಎಂಬುವುದನ್ನಾದರು ಪಠ್ಯ ಪುಸ್ತಕಗಳಲ್ಲಿ ಒಂದು ಪಾಠದಲ್ಲಿ ಅಳವಡಿಸಿ ಮಕ್ಕಳಿಗೆ ತಿಳಿಸುವ ಕೆಲಸವಾಗಬೇಕು. ಸಹಕಾರಿ ಸಂಸ್ಥೆಗಳು ಪ್ರತಿ ಗ್ರಾಮಕ್ಕೊಂದು ಇರಬೇಕು ಎಂದರು.

ರಾಜ್ಯದಲ್ಲಿ ಸುಮಾರು 46 ರಿಂದ 47 ಸಾವಿರ ಸಹಕಾರಿ ಸಂಸ್ಥೆಗಳಿವೆ. ಇದರಲ್ಲಿ 26 ಸಾವಿರ ಸಹಕಾರಿ ಸಂಸ್ಥೆಗಳು ಮಾತ್ರ ಲಾಭದಲ್ಲಿವೆ. ಸಾಮಾನ್ಯವಾಗಿ ವಾಣಿಜ್ಯ ಬ್ಯಾಂಕುಗಳಲ್ಲಿ ಹೂಡಿಕೆ, ಸಹಕಾರಿ ಸಂಸ್ಥೆಗಳಲ್ಲಿ ಸಾಲ ಪಡೆಯಲಾಗುತ್ತದೆ. ನಮ್ಮ ಹೂಡಿಕೆಯೂ ಸಹಕಾರಿ ಸಂಸ್ಥೆಗಳಲ್ಲಿ ಮಾಡಿದಾಗ ಮಾತ್ರ, ಸಹಕಾರಿ ಕ್ಷೇತ್ರ ಬೆಳೆಯುತ್ತದೆ. ರೈತರಿಗೆ ಸಹಕಾರಿ ಸಂಸ್ಥೆಗಳಲ್ಲಿಯೇ ಎಲ್ಲಾ ಸೌಲಭ್ಯಗಳು ಸಿಗುವಂತಾಗಬೇಕು. ರೈತರು ಉತ್ಪಾದಿಸುವ ವಸ್ತುಗಳಿಗೆ ರೈತರೇ ಬೆಲೆ ನಿಗದಿಪಡಿಸುವಂತಾಗಬೇಕು. ರೈತರು ಕೃಷಿ ಜೊತೆಗೆ ಕುಲ ಕಸುಬುಗಳಿಗೂ ಆದ್ಯತೆ ನೀಡಬೇಕು. ಸಹಕಾರಿಗಳನ್ನು ಒಗ್ಗೂಡಿಸುವ ಜೊತೆಗೆ ಎಲ್ಲರ ಜವಾಬ್ದಾರಿಯನ್ನು ನೆನಪಿಸುವಂತಹ ಸಮಾವೇಶ ಇದಾಗಿದೆ. ಸಹಕಾರ ಸಂಘಗಳ ಅಧ್ಯಕ್ಷರು ಆಯಾ ಗ್ರಾಮ ಪಂಚಾಯತಿ ಸದನಗಳಲ್ಲಿ ಭಾಗವಹಿಸುವುದು ಮತ್ತು ಗ್ರಾ.ಪಂ ಸದಸ್ಯರಾಗಿ ಬರುವ ರೀಯಲ್ಲಿ ತಿದ್ದುಪಡಿಯನ್ನು ತರಲು ಪ್ರಯತ್ನವನ್ನು ಮಾಡುತ್ತವೆ. ಸಹಕಾರಿ ಸಂಸ್ಥೆಗಳು, ಜನ ಸಂಸ್ಥೆಗಳಾಗಬೇಕು. ಹಾಗೂಸಹಕಾರಿಆಂದೋಲನಗಳು ಜನರ ಆಂದೋಲನಗಳಾಗಿದ್ದು, ಎಲ್ಲರ ಒಗ್ಗೂಡುವಿಕೆಯಿಂದ ಉನ್ನತ ಮಟ್ಟಕ್ಕೆ ಕೊಂಡೊಯ್ಯುವ ಆಶಯದಂತೆ ಸಹಕಾರಿ ಸಂಸ್ಥೆಗಳು ನಡೆಯುತ್ತಿವೆ ಎಂದು ಹೇಳಿದರು.

ಸಮಾಜದ ಕಟ್ಟಕಡೆಯ ವ್ಯಕ್ತಿಗಳು ಸಹಕಾರಿ ಕ್ಷೇತ್ರದಲ್ಲಿಬರಬೇಕು. ಈ ದಿಶೆಯಲ್ಲಿ ಮೀಸಲಾತಿ ತರುವುದು ಮತ್ತು ನಾಮನಿರ್ದೇಶನಕ್ಕಾಗಿ ತಿದ್ದುಪಡಿಗಳನ್ನು ವಿಧಾನಮಂಡಳದಲ್ಲಿ ಮಂಜೂರು ಮಾಡಿ, ಗೌರವಾನ್ವಿತ ರಾಜ್ಯಪಾಲರಿಗೆ ಸಲ್ಲಿಸಿದ್ದೇವೆ. ಈ ಬಗ್ಗೆ ಅವರು ಕೆಲವು ವಿಚಾರಗಳಬಗ್ಗೆ ಹೆಚ್ಚಿನ ಮಾಹಿತಿಯನ್ನು ಕೇಳಿದ್ದು, ಅದನ್ನು ಸಹ ಸಲ್ಲಿಸಿದ್ದೇವೆ. ಒಂದು ವೇಳೆ ಇದಕ್ಕೆ ಅನುಮೋಧನೆಯ ದೊರೆಯದೇ ಇದ್ದಲ್ಲಿ, ಮತ್ತೊಮ್ಮೆ ವಿಧೆಯಕವನ್ನು ಮಂಡನೆ ಮಾಡಿ ಸಲ್ಲಿಸುತ್ತೇವೆ. ಇದಕ್ಕೆ ನಮ್ಮ ಸರ್ಕಾರ



ಕ್ರಮ ಕೈಗೊಳ್ಳಲಿದೆ. ಇತ್ತೀಚೆಗೆ ಖಾಸಗಿ ಮತ್ತು ಅನಧೀಕೃತ ಲೇವಾದೇವಿದಾರ ವಸೂಲಾತಿ ತಬ್ಬಾಳಿಕೆ ಹಿನ್ನೆಲೆಯಲ್ಲಿ ಜನರು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಬಗ್ಗೆ ಮಾಧ್ಯಮಗಳಲ್ಲಿ ನೋಡಿದ್ದೇವೆ. ಈ ಬಗ್ಗೆ ಸುಗೀವಾಜ್ಞೆ ಮಾಡಬೇಕೆಂದು ಈಗಾಗಲೇ ಸರ್ಕಾರವು ತೀರ್ಮಾನ ಮಾಡಿದೆ. ಇಂತಹ ಆತ್ಮಹತ್ಯೆ ಪ್ರಕರಣಗಳು ಕಂಡುಬಂದರೆ, ಈಗಿರುವ ಕಾನೂನಿನಲ್ಲಿಯೇ ಪ್ರಕರಣ ದಾಖಲಿಸಿ ತಪ್ಪಿತಸ್ಥರಿಗೆ ಶಿಕಲ್ಷೆ ನೀಡಲು ಅವಕಾಶವಿದ್ದು, ಪೊಲೀಸ್ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಆರ್.ಡಿ.ಸಿ.ಸಿ ಬ್ಯಾಂಕಿನ ಕೇಂದ್ರ ಶಾಖೆಯನ್ನು ಕೊಪ್ಪಳ ಜಿಲ್ಲೆಗೆ ಬದಲಿಸುವ ಕುರಿತಂತೆ, ಈ ಬಗ್ಗೆ ಕಾರ್ಯಸಾಧ್ಯತಾ ಪಟ್ಟಿ ತಯಾರಿಸಿ, ಆರ್.ಬಿ.ಐ.ಗೆಸಲ್ಲಿಸಲುಕ್ರಮವಹಿಸಲಾಗುವುದು ಎಂದರು.

ಸಹಕಾರಿ ಸಂಸ್ಥೆಗಳ ಸದಸ್ಯರು, ಕನಿಷ್ಠ ವ್ಯವಹಾರವನ್ನುನಡೆಸಬೇಕು. ಕನಿಷ್ಠವ್ಯವಹಾರ ಮಾಡುವವರಿಗೆ ಮತದಾನ ಮಾಡುವ ಹಕ್ಕನ್ನು ನೀಡುವ ಕೆಲವನ್ನು ಮಾಡಿದ್ದೇವೆ. ಅಸಹಾಯಕನಿಗೆ ತ್ವರಿತವಾಗಿ ಸಹಾಯ ಮಾಡುವಂತಹ ಸಂಸ್ಥೆಗಳು ಸಹಕಾರಿ ಸಂಸ್ಥೆಗಳಾಗಿವೆ. ಸಂಸ್ಥೆಗಳಿಂದ ಪಡೆಯುವ ಸಾಲ ಮರು ಪಾವತಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಸಹಕಾರಿಗಳನ್ನುಜಾಗೃತಿ ಮೂಡಿಸಲು ಕಮ್ಮಿಕೊಂಡಿರುವ ಇಂತಹ ಸಹಕಾರ ಜಾಗೃತಿ ಸಮಾವೇಶ ಹೆಚ್ಚು-ಹೆಚ್ಚಾಗಿ ನಡೆಯಬೇಕು. ಇಂದಹ ಸಮ್ಮೇಳನಗಳು ಪ್ರತಿ ಜಿಲ್ಲೆ ಮತ್ತು ತಾಲ್ಲೂಕು ಮಟ್ಟದಲ್ಲಿಯೂ ನಡೆಯಬೇಕು. ಕುಕನೂರಿನ ಸಹಕಾರಿ ಜಾಗೃತಿ ಸಮಾವೇಶದ ನಿರ್ಣಯಗಳನ್ನು ಜಾರಿ ಮಾಡುವಂತ ಕೆಲಸವನ್ನು ನಾವು ಮಾಡುತ್ತೇವೆ ಎಂದು ಹೇಳಿದರು.

ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್ ತಂಗಡಗಿ ಅವರು ವಸ್ತು ಪ್ರದರ್ಶನ ಉದ್ಘಾಟಿಸಿ ಮಾತನಾಡಿ, ಸಹಕಾರ ಜಾಗೃತಿ ಸಮಾವೇಶ ಬಹಳ ವಿಶಿಷ್ಟವಾದದ್ದು, ಈ ಸಹಕಾರ ರಂಗ ಬೆಳಕು ಆಗಿದ್ದು, ಅದು ಬೆಳೆದಾಗ ಮಾತ್ರ ರೈತರು ನೆಮ್ಮದಿಯಿಂದ ಇರಲು ಸಾಧ್ಯ, ಪ್ರತಿಯೊಂದು ಗ್ರಾಮದಲ್ಲಿ ಸಹಕಾರ ಸಂಘ ಇರಬೇಕು. ಸರ್ಕಾರ ಬಹಳ ಸೌಲಭ್ಯ ಕೊಡುತ್ತಿದೆ. ಅವುಗಳನ್ನ ಉಪಯೋಗ ಮಾಡಬೇಕು ಅಂದ್ರೆ, ಸಹಕಾರ ಸಂಘ ಬೆಳೆಯಬೇಕು. ಸಹಕಾರ ರಂಗ ಬೆಳೆಯಲು ಎಲ್ಲರ ಸಹಕಾರ ಬಹಳ ಮುಖ್ಯವಾಗಿದೆ. ಇಲ್ಲಿನ ಜನರಿಗೆ ಮಾಹಿಯ ಕೊರತೆ ಹೆಚ್ಚಾಗಿದ್ದು, ವ್ಯವಹಾರ ಮಾಡಲು ತೊಂದರೆಯಾಗುತ್ತಿದೆ. ಅದಕ್ಕಾಗಿ ರಾಯಚೂರು-ಕೊಪ್ಪಳನಡುವೆಇರುವಒಂದೇ ಆರ್.ಡಿ.ಸಿ.ಸಿ.ಬ್ಯಾಂಕ್ ಇರುವುದರಿಂದ ಅದನ್ನ ವಿಭಜಿಸಿ ಕೊಪ್ಪಳಕ್ಕೆ ಪ್ರತ್ಯೇಕವಾಗಿ ಆರ್.ಡಿ.ಸಿ.ಸಿ. ಬ್ಯಾಂಕನ್ನು ಕೊಡಬೇಕು ಎಂದರು.

ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರವಾದ ಎಚ್.ಕೆ.ಪಾಟೀಲ ಅವರು ಸಹಕಾರ ವಾರಪತ್ರಿಕೆ ವಿಶೇಷ ಸಂಚಿಕೆಯನ್ನು ಬಿಡುಗಡೆಗೊಳಿಸಿ ಮಾತನಾಡಿ, ಕಣಗಿನಹಾಳ ಗ್ರಾಮದಲ್ಲಿ ಮೊದಲ ಸಹಕಾರಿ ಸೊಸೈಟಿ ಪ್ರಾರಂಭವಾಯಿತು. ಆ ನಂತರ ಹಲವಾರು ಸಹಕಾರಿಗಳು ಇದರ ಅಭಿವೃದ್ಧಿಗಾಗಿ ಶ್ರಮಿಸಿದ್ದಾರೆ. ಇಂದಿನ ಯುವಕರು ಸಹಕಾರ ಕ್ಷೇತ್ರಕ್ಕೆ ಬರಲು ಹಿಂದೆಟು ಹಾಕುತ್ತಿದ್ದಾರೆ ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆವಹಿಸಿದ್ದ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸವರಾಜ ರಾಯರೆಡ್ಡಿ ಅವರು ಮಾತನಾಡಿ, ಇದು ಒಂದು ಐತಿಹಾಸಿಕ ಜಾಗೃತಿ ಸಮಾವೇಶ. ಇತರೆ ವಿಷಯಗಳ ಸಮಾವೇಶಗಳಾಗ್ತಾ ಇದ್ದವು. ಸಹಕಾರಿ ಕ್ಷೇತ್ರದ ಅಭಿವೃದ್ಧಿಗಾಗಿ ಈ ಜಾಗೃತಿ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ. ಮುಂಬೈ ಕರ್ನಾಟಕ ಭಾಗದಲ್ಲಿ ಅದಷ್ಟು ಸಹಕಾರಿ ಜಾಗೃತಿ ನಮ್ಮ ಕಲ್ಯಾಣ ಕರ್ನಾಟಕದ ಭಾಗದಲ್ಲಿ ಅಷ್ಟು ಜಾಗೃತಿ ಆಗಿಲ್ಲ. ಈ ದಿಶೇಯಲ್ಲಿ ಕುಕನೂರಿನಲ್ಲಿ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ನಮ್ಮ ರಾಜ್ಯದಲ್ಲೆ ಮೊದಲು ಕಣಗಿನಹಾಳ ಗ್ರಾಮದಲ್ಲಿ ಪ್ರಾಥಮಿಕ ವ್ಯವಸಾಯ ಸಹಕಾರಿ ಸಂಘವನ್ನು ಸ್ಥಾಪಿಸಿ ಕ್ರಾಂತಿಯನ್ನ ಮಾಡಿದ ಸಿದ್ದನಗೌಡ ಸಣ್ಣ ರಾಮನಗೌಡ ಪಾಟೀಲ ಅವರು, ಜನರಿಗೆ ಸಹಕಾರಿ ಸಂಘಗಳ ಬಗ್ಗೆ ಅರಿವನ್ನ ಮುಡಿಸುವ ಪ್ರಯತ್ನ ಮಾಡಿದ್ದಾರೆ ಎಂದರು.

ಸನ್ಮಾನ: ಸಕಾರ ಕ್ಷೇತ್ರದಲ್ಲಿ ಶ್ರಮಿಸಿದ ಮಾಜಿ ಸಚಿವರಾದ ಎಸ್.ಎಸ್.ಪಾಟೀಲ್, ಹಿರಿಯ ಸಹಕಾರಿಗಳಾದ ರಾಘವೇಂದ್ರಚಾರ್ಯ ಜೋಶಿ, ಶಿದ್ದನಗೌಡ ಹೊರಪೇಟೆ, ಶ್ರೀಪಾದಪ್ಪ ಅಧಿಕಾರಿ, ಯಂಕಣ್ಣ ಯರಾಶಿ, ಕೆರಿಬಸಪ್ಪ ನಿಡಗುಂದಿ, ಬಸವರಾಜ ಉಳ್ಳಾಗಡ್ಡಿ, ಬಿ.ಎಮ್.ಶಿರೂರ ಅವರಿಗೆ ಸಮಾರಂಭದಲ್ಲಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಮುನಿರಾಬಾದ್ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ತುಂಗಭದ್ರಾ ಯೋಜನೆಯ ಅಧ್ಯಕ್ಷರಾದ ಹಸನಸಾಬ ನಭಿಸಾಬ ದೋಟಿಹಾಳ, ಮಾಜಿ ಸಚಿವರು ಕರ್ನಾಟಕ ರಾಜ್ಯ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳದ ಅಧ್ಯಕ್ಷರಾದ ವೆಂಕಟರಾವ್ ನಾಡಗೌಡ, ಮಾಜಿ ಸಚಿವರಾದ ಅಮರೇಗೌಡ ಪಾಟೀಲ್ ಬಯ್ಯಾಪುರ, ರಾಯಚೂರು ಮತ್ತು ಕೊಪ್ಪಳ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಅಧ್ಯಕ್ಷರಾದ ವಿಶ್ವನಾಥ ಪಾಟೀಲ ತೋರಣದಿನ್ನಿ, ರಾಯಚೂರು ಮತ್ತು ಕೊಪ್ಪಳ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕಿನ ಉಪಾಧ್ಯಕ್ಷರಾದ ಶಿವಶಂಕರಗೌಡ ಪಾಟೀಲ್, ಕೊಪ್ಪಳ ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷರು ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕರಾದ ಶೇಖರಗೌಡ ವಿ. ಮಾಲಿಪಾಟೀಲ, ರಾಯಚೂರು ಎಣ್ಣೆಬೀಜ ಬೆಳೆಗಾರರ ಸಹಕಾರ ಸಂಘಗಳ ಒಕ್ಕೂಟದ ಅಧ್ಯಕ್ಷರಾದ ಸುರೇಶರಡ್ಡಿ ಮಾದಿನೂರು, ಕೊಪ್ಪಳ ಮತ್ತು ಬಳ್ಳಾರಿ ಕಾಸ್ಕಾರ್ಡ ಬ್ಯಾಂಕಿನ ನಿರ್ದೇಶಕರಾದ ವೃಷಬೇಂದ್ರಯ್ಯ ಜೆ.ಎಮ್., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ದಿ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ, ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹೇಮಂತ್ ಕುಮಾರ್, ಕೊಪ್ಪಳ ಸಹಕಾರ ಸಂಘಗಳ ಉಪನಿಬಂಧಕ ಸಜ್ಜನರ ಪ್ರಕಾಶ ಸೇರಿದಂತೆ ಜನಪ್ರತಿನಿಧಿಗಳು, ವಿವಿಧ ಇಲಾಖೆಗಳ ಹಾಗೂ ಸಹಕಾರ ಇಲಾಖೆ ಅಧಿಕಾರಿ, ಸಿಬ್ಬಂದಿ ಉಪಸ್ಥಿತರಿದ್ದರು.

# ಬೆಂಬಲ ಬೆಲೆ ಯೋಜನೆ: ಕಡಲೇಕಾಳು ಖರೀದಿ ಕೇಂದ್ರಗಳ ಪ್ರಾರಂಭ

**ಕೊಪ್ಪಳ :** ಕೊಪ್ಪಳ ಜಿಲ್ಲೆಯಲ್ಲಿ ಹಿಂಗಾರು ಹಂಗಾಮಿನಲ್ಲಿ ಕಡಲೇಕಾಳು ಉತ್ಪನ್ನ ಖರೀದಿಸುವ ಸಂಬಂಧ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕಡಲೇಕಾಳು ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ ಎಂದು ಕೃಷಿ ಮಾರಾಟ ಇಲಾಖೆ ಸಹಾಯಕ ನಿರ್ದೇಶಕರು ಹಾಗೂ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ತಿಳಿಸಿದ್ದಾರೆ.

ಸರ್ಕಾರದ ಆದೇಶದಂತೆ 2024-25ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ಕಡಲೇಕಾಳು ಪ್ರತಿ ಕ್ವಿಂಟಾಲ್‌ಗೆ ರೂ. 5650 ಗಳಂತೆ ಎಕರೆಗೆ 4 ಕ್ವಿಂಟಾಲ್‌ನಂತೆ ಒಬ್ಬ ರೈತರಿಂದ ಗರಿಷ್ಠ 20 ಕ್ವಿಂಟಲ್‌ರಂತೆ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ ಕೊಪ್ಪಳ ಜಿಲ್ಲೆಯ ರೈತರಿಂದ ಖರೀದಿಸುವ ಕುರಿತು ಇತ್ತೀಚೆಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿಯ ಸಭೆ ಜರುಗಿಸಿ, ಕೊಪ್ಪಳ ತಾಲ್ಲೂಕಿನ ಮುದ್ದಾಬಳ್ಳಿ, ಹಿರೇಸಿಂಧೋಗಿ, ಕವಲೂರು, ಅಳವಂಡಿ ಹಾಗೂ ಘಟ್ಟಿರೆಡ್ಡಿಹಾಳ. ಕನಕಗಿರಿ ತಾಲ್ಲೂಕಿನ ನವಲಿ ಹಾಗೂ ಕನಕಗಿರಿ. ಕುಷ್ಟಗಿ ತಾಲ್ಲೂಕಿನ ಹನುಮಸಾಗರ, ತಾವರಗೇರಾ (ಮೆಣೇದಾಳ) ಹಾಗೂ ಕುಷ್ಟಗಿ. ಕುಕನೂರು ತಾಲೂಕಿನ ಚಿಕ್ಕಿನಕೊಪ್ಪ, ಬನ್ನಿಕೊಪ್ಪ, ತಳಕಲ್, ಮುಡಲಗೇರಿ ಹಾಗೂ ಕುಕನೂರಿನಲ್ಲಿ ಮತ್ತು ಯಲಬುರ್ಗಾ ತಾಲೂಕಿನ ಯಲಬುರ್ಗಾ, ಮುಧೋಳ ಹಾಗೂ ತೊಂಡಿಹಾಳದಲ್ಲಿ ಕಡಲೇಕಾಳು ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲು ತೀರ್ಮಾನಿಸಲಾಗಿದೆ.

ನೋಡಲ್ ಅಧಿಕಾರಿಗಳ ವಿವರ: ಕಡಲೇಕಾಳು ಖರೀದಿ ಕೇಂದ್ರಗಳಾದ ಮುದ್ದಾಬಳ್ಳಿ, ಹಿರೇಸಿಂಧೋಗಿ, ಕವಲೂರು, ಅಳವಂಡಿ ಹಾಗೂ ಘಟ್ಟಿರೆಡ್ಡಿಹಾಳ ಖರೀದಿ ಕೇಂದ್ರಗಳಿಗೆ ಕೊಪ್ಪಳ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿ ವಿ.ಬಸವರಾಜ ಮೊ.ಸಂ: 9448765143, ಇವರನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಿದೆ. ನವಲಿ ಹಾಗೂ ಕನಕಗಿರಿ ಖರೀದಿ ಕೇಂದ್ರಕ್ಕೆ ಗಂಗಾವತಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿ ಹರೀಶ ಪತ್ತಾರ ಮೊ.ಸಂ: 9060893320. ಕುಷ್ಟಗಿ ಹನುಮಸಾಗರ, ತಾವರಗೇರಾ (ಮೆಣೇದಾಳ) ಖರೀದಿ ಕೇಂದ್ರಕ್ಕೆ ಕುಷ್ಟಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿ ಸುರೇಶ ಬಿ ತಂಗನೂರು ಮೋ.ಸಂ: 9880886909. ಚಿಕ್ಕಿನಕೊಪ್ಪ, ಬನ್ನಿಕೊಪ್ಪ, ತಳಕಲ್, ಮುಡಲಗೇರಿ, ಕುಕನೂರು, ಹಾಗೂ ಯಲಬುರ್ಗಾ, ಮುಧೋಳ ಮತ್ತು ತೊಂಡಿಹಾಳದಲ್ಲಿ (ಕೇಂದ್ರ ಕಚೇರಿ, ಕುಕನೂರು) ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿ ಗುರುಪ್ರಸಾದ್ ಗುಡಿ ಮೊ.ಸಂ: 9972054874, ಇವರನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ.

ಪ್ರತಿ ಎಕರೆಗೆ ಗರಿಷ್ಠ 4 ಕ್ವಿಂಟಲ್‌ರಂತೆ ಪ್ರತಿ ರೈತರಿಂದ ಗರಿಷ್ಠ 20 ಕ್ವಿಂಟಲ್ ಕಡಲೇಕಾಳು ಉತ್ಪನ್ನವನ್ನು ಖರೀದಿಸಲಾಗುತ್ತದೆ. ಎಫ್.ಎ.ಕ್ಯೂ ಗುಣಮಟ್ಟದ ಕಡಲೇಕಾಳನ್ನು ಮಾತ್ರ ಖರೀದಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ, ಕೊಪ್ಪಳ ದೂ.ಸಂ: 08539-230040, ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಭೂ ಮಾಪಕರ ಮೇಲೆ ಮಾರಣಾಂತಿಕ ಹಲ್ಲೆ

**ಇಂಡಿ :** ಸಾರ್ವಜನಿಕ ಸರ್ಕಾರಿ ರಸ್ತೆ ಅಳತೆ ಮಾಪನ ಮಾಡಲು ಹೊದ ಭೂಮಾಪಕರೊಬ್ಬರಿಗೆ ಏಕಾಏಕಿ ಮಾರಣಾಂತಿಕವಾಗಿ ಹಲ್ಲೆ ಮಾಡಿದ ಘಟನೆ ಚಡಚಣ ತಾಲೂಕಿನ ಲೋಣಿ ಬಿಕೆ ಗ್ರಾಮದಲ್ಲಿ ಮಂಗಳವಾರ ತಾಲೂಕಿನ ಝಳಕಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಘಟನೆ ವಿವರ: ಚಡಚಣ ತಾಲೂಕಿನ ಲೋಣಿ.ಬಿ.ಕೆ. ಗ್ರಾಮದಸರ್ವೆ.ನಂ341 ಮತ್ತು 342ರಲ್ಲಿನ ಸರ್ಕಾರಿ ರಸ್ತೆ ಅಳತೆ ಸಲುವಾಗಿ ಚಡಚಣ ತಹಶೀಲ್ದಾರ್ ಆದೇಶದಂತೆ ಇಂಡಿ ಭೂ ಮಾಪನ ಇಲಾಖೆಯ ಭೂಮಾಪಕ ಮಹಾಂತಪ್ಪ ಶ್ರೀಶೈಲ ಸಜ್ಜನ ಇವರು ಸರ್ವೆ ಸ್ಥಳಕ್ಕೆ ಹೋಗಿದ್ದಾರೆ.

ಆಗ ಭೂಮಾಪನ ಮಾಡಬೇಕು ಎನ್ನುವಷ್ಟರಲ್ಲಿ ಸ್ಥಳಿಯ ಗ್ರಾಮದವರಾದ ವಿಕಾಸ ಕಲ್ಲಣ್ಣಗೌಡ ಪಾಟೀಲ, ರವೀಂದ್ರ ಗುರಪ್ಪ ಕಾಂಬ್ಳೆ, ಸಿದ್ದರಾಮ ಗಿರಿಮಲ್ಲ ಉಟಗಿ, ವಿಕಾಸ ಜೀವಪ್ಪ ಕಾಂಬಳೆ ಹಾಗೂ ಇತರರು ಬಂದು ಅಳತೆ ಕೆಲಸಕ್ಕೆ ಅಡ್ಡಿ ಪಡಿಸಿ ಅವಾಚ್ಯ ಶಬ್ದಗಳಿಂದ ನಿಂದಿಸಿ ದೈಹಿಕವಾಗಿ ಮಾರಣಾಂತಿಕವಾಗಿ ಹಲ್ಲೆ ಮಾಡಿದ್ದಾರೆ.

ಆದ್ದರಿಂದ ಹಲ್ಲೆ ಮಾಡಿವರು ವಿರುದ್ಧ ಪ್ರಕರಣ ದಾಖಲಿಸಿ ಸೂಕ್ತ ಕಾನೂನು ಕ್ರಮ ಜರುಗಿಸಬೇಕು. ಸರ್ಕಾರಿ ಕೆಲಸಕ್ಕೆ ಭದ್ರತೆ ಒದಗಿಸುವುದರ ಜೊತೆಗೆ ಈ ಪ್ರಕರಣವನ್ನು ಸರ್ಕಾರ ಗಂಭೀರವಾಗಿ



ಪರಿಗಣಿಸಬೇಕು ಎಂದು ಭೂಮಾಪನ ಇಲಾಖೆಯ ಸಿಬ್ಬಂದಿ ವರ್ಗದವರು ಆಗ್ರಹಿಸಿದ್ದಾರೆ.

ಮಾರಣಾಂತಿಕವಾಗಿ ಹಲ್ಲೆಗೊಳಗಾದ ಮಹಾಂತಪ್ಪ ಶ್ರೀಶೈಲ ಸಜ್ಜನ ಇವರನ್ನು ಇಂಡಿ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ಕುರಿತು ಝಳಕಿ ಪೊಲೀಸರಿಗೆ ಮಾಹಿತಿ ನಿಡಿದ್ದಾರೆ ಎನ್ನಲಾಗಿದೆ.

# ಸರ್ವಜ್ಞ ವಿದ್ಯಾಪೀಠದಲ್ಲಿ ಕಾಯಕ ಶರಣರ ಜಯಂತಿ ಆಚರಣೆ




**ತಾಳಿಕೋಟೆ :** ಪಟ್ಟಣದ ಸರ್ವಜ್ಞ ವಿದ್ಯಾಪೀಠ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಕಾಯಕ ಶರಣರ ಜಯಂತಿಯನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಸ್ಥಾಪಕ ಅಧ್ಯಕ್ಷರಾದ ಸಿದ್ದನಗೌಡ ಮಂಗಳೂರ ರವರು ಭಾವಚಿತ್ರಕ್ಕೆ ಪುಷ್ಪ ನಮನವನ್ನು ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯೋಪಾಧ್ಯರಾದ ಸಂತೋಷ ಪವಾರ, ಶಿಕ್ಷಕರಾದ ರಾಜು ಜವಳಗೇರಿ, ದೈಹಿಕ ಶಿಕ್ಷಕರಾದ ಬಸವರಾಜ ಚಳ್ಳಗಿ, ಶಾಂತಗೌಡ ಬಿರಾದಾರ, ಭೀಮನಗೌಡ ಸಾಸನೂರ, ರಸೂಲಸಾ ತುರ್ಕನಗೇರಿ, ರವಿಕುಮಾರ ಮಲ್ಲಾಬಾದಿ, ಬಸವರಾಜ ಸವದತ್ತಿ, ಮೌಲಾಲಿ ವಾಲಿಕಾರ, ಸಿದ್ದನಗೌಡ ಮೂದನೂರು, ಶರಣಗೌಡ ಕಾಚಾಪುರ, ರಮೇಶ ಪಾಸೋಡಿ, ರೂಪಾ ಪಾಟೀಲ, ಶಿವಲೀಲಾ ಚುಂಚನೂರ, ದೇವಿಂದ್ರ ಗುಳೆದ, ಅನಿತಾ ಚೌದ್ರಿ, ಅಂಬುಜಾ ಹಜೇರಿ, ಶಿವಕುಮಾರ ಕುಂಬಾರ, ರಾಜಬಿ ಬಿದರಿ,ಕಲ್ಪನಾಹಜೇರಿ,ನಾಗರತ್ನಮೈಲೇಶ್ವರ,ಹೇಮಾ ಕೊಡೆಕಲ್, ನಾಗಶ್ರೀ ನಾಯಕ, ಮೇಘಾ ಪಾಟೀಲ, ಮುಬಿನ ಮುರಾಳ, ತನುಶ್ರೀ ಮಹೇಂದ್ರಕರ, ಶಂಕ್ರಮ್ಮ, ಮುಬಾರಕ ಬನಹಟ್ಟಿ ಹಾಗೂ ಗುರು ಬಳಗದವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ತಂತ್ರಜ್ಞಾನದ ಸಮರ್ಪಕ ಬಳಕೆಗೆ ಅರಿವು ಅತ್ಯಗತ್ಯ: ಜಿಲ್ಲಾಧಿಕಾರಿ ಟಿ. ಭೂಬಾಲನ್

**ವಿಜಯಪುರ :** ಅಂತರ್ಜಾಲವು ಒಂದು ಶಕ್ತಿಯುತ ಸಾಧನವಾಗಿದೆ. ಸರಿಯಾದ ಬಳಕೆಯು ಜೀವನವನ್ನು ಸುಲಭಗೊಳಿಸಬಹುದಾಗಿದ್ದು, ತಂತ್ರಜ್ಞಾನವನ್ನುಜವಾಬ್ದಾರಿಯುತವಾಗಿ ಬಳಸಬೇಕು. ಸಮರ್ಪಕ ಬಳಕೆಗೆ ಅರಿವು ಅತ್ಯಗತ್ಯವಾಗಿದೆ ಎಂದುಜಿಲ್ಲಾಧಿಕಾರಿಟಿ.ಭೂಬಾಲನ್‌ಅವರು ಹೇಳಿದರು. ನಗರದ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ ಹಾಗೂ ಮಾಹಿತಿ ತಂತ್ರಜ್ಞಾನ ಇಲಾಖೆಯ ಸಂಯುಕ್ತಾಶ್ರದಲ್ಲಿ ಹಮ್ಮಿಕೊಂಡಿದ್ದ ಸುರಕ್ಷಿತ ಅಂತರ್ಜಾಲ ದಿನದ ಅಂಗವಾಗಿ ಹಮ್ಮಿಕೊಂಡ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಆಧುನಿಕ ಜಗತ್ತಿನಲ್ಲಿ ಅಂತರ್ಜಾಲವು ಮಾನವ ಬದುಕಿನ ಅವಿಭಾಜ್ಯ ಅಂಗವಾಗಿದೆ. ಇದರ ನಡುವೆಯೇ ವಿವಿಧ ಮಾದರಿಗಳಲ್ಲಿ ಸೈಬರ್ ವಂಚನೆ ನಡೆಯುತ್ತಿದೆ. ಸೈಬರ್ ವಂಚನೆಗಳನ್ನುತಡೆಗಟ್ಟಲುಸಾರ್ವಜನಿಕರು ಜಾಗೃತಿ ಹೊಂದಬೇಕು. ದತ್ತಾಂಶ ಹಾಗೂ ಮಾಹಿತಿಯ ಸಂರಕ್ಷಣೆಯ ಅರಿವು ಹೊಂದುವುದು ಅತ್ಯವಶ್ಯಕವಾಗಿದೆ. ಸಮರ್ಪಕವಾಗಿ ಅರಿವು ಹೊಂದಿದಾಗ ಮಾತ್ರ ಸೈಬರ್ ವಂಚನೆಯನ್ನು ತಪ್ಪಿಸಬಹುದಾಗಿದೆ ಎಂದು ಹೇಳಿದರು.

ಜಿಲ್ಲಾ ಮಟ್ಟದ ಅಧಿಕಾರಿಗಳು ಕಚೇರಿಗಳಲ್ಲಿ ತಮ್ಮ ವೈಯಕ್ತಿಕ ಲಾಗಿನ್‌ಗಳ ಬಗ್ಗೆ ಅರಿವು ಹೊಂದಿ ಸುರಕ್ಷಿತವಾಗಿರುವುದನ್ನು



ಖಾತ್ರಿಪಡಿಸಿಕೊಳ್ಳುವ ಮೂಲಕ ಬೇರೆಯವರಿಗೆ ಮಾಹಿತಿ ಹಂಚಿಕೆಯಾಗದಂತೆ ಎಚ್ಚರಿಕೆ ವಹಿಸಬೇಕು. ಅಂತರಜಾಲಯುಮಾಹಿತಿಯಆಗರವಿದ್ದು, ಅದರ ಬಳಕೆ ಕುರಿತು ಸ್ವಯಂ ಅರಿವು ಹೊಂದಬೇಕು ಎಂದು ತಿಳಿಸಿದ ಅವರು, ಸೈಬರ್ ಅಪರಾಧಗಳ ಕುರಿತಾಗಿ ಗ್ರಾಮೀಣ ಭಾಗದ ಜನರಿಗೆ ಸೂಕ್ತ ತಿಳುವಳಿಕೆ ನೀಡುವ ಜನಜಾಗೃತಿ ಕಾರ್ಯಕ್ರಮ ಜಿಲ್ಲೆಯಲ್ಲಿ ಹಮ್ಮಿಕೊಂಡು ಪರಿಣಾಮಕಾರಿಯಾಗಿ ಜಾಗೃತಿ ಮೂಡಿಸಲಾಗುವುದು ಎಂದು ಅವರು ಹೇಳಿದರು.

ಇಂದಿನ ತಂತ್ರಜ್ಞಾನದ ಯುಗದಲ್ಲಿ ಪ್ರತಿಯೊಬ್ಬರು ಯಾವುದಾದರೊಂದು ತಂತ್ರಜ್ಞಾನದಬಳಕೆದಿನನಿತ್ಯಮಾಡುತ್ತಿದ್ದಾರೆ. ಇದರಸಮರ್ಪಕಬಳಕೆಯಾಗಬೇಕು.ಇದರ ದುರುಪಯೋಗವಾಗದಂತೆ, ಯಾವುದೇ ಸೈಬರ್ ವಂಚನೆಗಳಿಗೆ ಅವಕಾಶ ನೀಡದೇ, ಮೊಬೈಲ್ ಸೇರಿದಂತೆ ತಂತ್ರಜ್ಞಾನದ ಸೂಕ್ತ ಅರಿವು-ತಿಳುವಳಿಕೆ ಹೊಂದಬೇಕು. ಸಂಶಯಾಸ್ಪದ ಕರೆಗಳಿಗೆ ಸ್ಪಂದಿಸದೇ, ಯಾವುದೇ ವೈಯಕ್ತಿಕ ವಿವರಗಳನ್ನು ಅಪರಿಚಿತರೊಂದಿಗೆ ಹಂಚಿಕೊಳ್ಳಬಾರದು. ತಂತ್ರಜ್ಞಾನದ ಸಂಪೂರ್ಣ ಮಾಹಿತಿಯನ್ನು ಅರಿತುಕೊಂಡು ಜಾಗರೂಕತೆಯಿಂದ, ಸಮರ್ಪಕವಾಗಿ ಬಳಕೆ ಮಾಡಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದ ಅಲ್ತಾಬ್ ಬಾಲಸಿಂಗ್ ಅವರು ಮಾತನಾಡಿ, ಯಾವುದೇ ರೀತಿ ಸೈಬರ್ ವಂಚನೆಗೆ ಗುರಿಯಾದಲ್ಲಿ ಸಹಾಯವಾಣಿ 1930ಗೆ ಕರೆ ಮಾಡಿ ದೂರು ಸಲ್ಲಿಸಬಹುದು ಹಾಗೂ ಪೊಲೀಸ್ ಠಾಣೆಗೆ ಹೋಗಿ ದೂರು ನೀಡಬಹುದು. ಇದೇ ಸಂದರ್ಭದಲ್ಲಿ www.cybercrime.gov.in ವೆಬ್‌ಸೈಟ್ ನಲ್ಲಿ ದೂರು ನೀಡುವುದರ ಬಗ್ಗೆ ವಿವರಿಸಿದರು. ದಿನನಿತ್ಯದ ಜೀವನದಲ್ಲಿ ಇಂಟರ್‌ನೆಟ್ ಬಳಕೆ, ಅದರ ಸಾಧಕ-ಬಾಧಕಗಳು, ಸೈಬರ್ ವಂಚನೆಗಳು, ವಂಚನೆಗೊಳಗಾದ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳು, ಮೋಸ ಹೋಗದಂತೆ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಪಿಪಿಟಿ ಮೂಲಕ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿ ವಿಜಯಕುಮಾರ ಆಜೂರ,ಮುಖ್ಯಯೋಜನಾಧಿಕಾರಿನಿಂಗಪ್ಪ ಗೋಠೆ, ಯೋಜನಾ ನಿರ್ದೇಶಕ ಬಿ.ಎಸ್. ರಾಠೋಡ, ಮುಖ್ಯ ಲೆಕ್ಕಪತ್ರಾಧಿಕಾರಿ ರಾಮಣ್ಣ ಅಥಣಿ, ಎನ್‌ಐಸಿ ಅಧಿಕಾರಿ ಶಿವಾನಂದ ಗೂಗವಾಡ ಸೇರಿದಂತೆ ಜಿಲ್ಲಾ ಹಾಗೂ ತಾಲೂಕಾ ಮಟ್ಟದ ಅಧಿಕಾರಿ-ಸಿಬ್ಬಂದಿಗಳು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಅಂತರ್‌ಜಾಲ ಜಾಗೃತಿ ಕುರಿತ ಕರಪತ್ರಗಳನ್ನು ಬಿಡುಗಡೆಗೊಳಿಸಿದರು.

# ಡಾ. ಎಸ್.ಕೆ. ಕೊಪ್ಪಾ ಅವರ ಬದುಕು-ಬರಹ ಇತರರಿಗೆ ಮಾದರಿ: ಡಾ. ಡಿ.ವಿ. ಪರಶಿವಮೂರ್ತಿ

**ವಿಜಯಪುರ :** ಡಾ. ಎಸ್.ಕೆ.ಕೊಪ್ಪಾ ಅವರ ಬದುಕು ಮತ್ತು ಸಾಹಿತ್ಯವು ನಾಡಿನ ಜನತೆಗೆ ಸಂದೇಶ ನೀಡುವಂತಹದು. ಅವರ ಶೋಧಿತ ಕೃತಿ 'ತರ್ದವಾಡಿ ನಾಡು'.ಶಾಸನ, ಸಂಶೋಧನೆ, ಸಂಸ್ಕೃತಿ, ಉದಾರತೆ ಮತ್ತು ಹೋರಾಟದ ಅಂಶಗಳು ಒಳಗೊಂಡಿರುವುದರಿಂದ ನಮ್ಮ ಇರುವಿಕೆಯ ಮೇಲೆ ಬಹಳಷ್ಟು ಪರಿಣಾಮ ಬೀರುತ್ತವೆ. ಅಷ್ಟೇ ಅಲ್ಲ ಸಂಶೋಧಕರಿಗೆ ಅವರ ಇನ್ನಿತರ ಕೃತಿಗಳು ಕೂಡಾ ಮಾರ್ಗದರ್ಶಿಯಾಗಿವೆ ಎಂದು ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಾ. ಡಿ.ವಿ. ಪರಶಿವಮೂರ್ತಿ ಅವರು ಹೇಳಿದರು. ಡಾ.ಫ.ಗು.ಹಳಕಟ್ಟಿಸಂಶೋಧನಕೇಂದ್ರದಲ್ಲಿಆಯೋಜಿಸಿದ್ದ ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು.

ಈ ಸಂಶೋಧನ ಕೇಂದ್ರವು ಉಳಿದವುಗಳಿಗೆ ಮಾದರಿಯಾಗಿದೆ ಎಂದರು.

ಡಾ. ಎಂ.ಎಂ. ಪಡಶೆಟ್ಟಿ ಅವರು, ಕೊಪ್ಪಾ ಅವರನ್ನು ವಿದ್ಯಾರ್ಥಿ ಜೀವನದಿಂದ ತಿಳಿದಿದ್ದೇನೆ. ಅವರ ಒಡನಾಟವು ಸಂಶೋಧನೆ, ಸಂಪಾದನೆ, ಪ್ರಕಟಣೆ, ಬೋಧನೆ ಮತ್ತು ಚಿಂತನೆಯ ಮೂಲಕ ವಿಚಾರಗಳು ವ್ಯಕ್ತ ಆಗಿರುವುದರಿಂದ ಎಂತಹ ಪ್ರಸಂಗದಲ್ಲೂ ನಮ್ಮ ಅನುಸಂಧಾನವು ಇರುತ್ತಿತ್ತು ಎಂದರು.

ಡಾ. ಗುರುಪಾದ ಮರಿಗುದ್ದಿ ಅವರು ಮಾತನಾಡಿ, 'ತರ್ದವಾಡಿ ಪುಸ್ತಕ'ವು ಬಹಳಷ್ಟು ಜನರಿಂದ ಮೆಚ್ಚುಗೆ ಪಡೆದಿದೆ. ಇದರಲ್ಲಿ ಅಂದಂದಿನ ಕಾಲದ ಸಾಂಸ್ಕೃತಿಕ ಪ್ರಜ್ಞೆಯನ್ನು 350 ಶಾಸನ ಅಧ್ಯಯನ ಮಾಡಿರುವದರಿಂದ



ಅಲ್ಲಿ ವಿಶಾಲ ಅರ್ಥವನ್ನು ಹೊಂದಿದ ಅಪರೂಪದ ಗ್ರಂಥವಾಗಿದೆ ಎಂದರು. ಶಾಸನಗಳು ಹೇಳುವ ತ್ಯಾಗ, ವೀರ, ಮಾಸ್ತಿ, ದಾನ, ನಿಷಧಿಗಲ್ಲುಗಳನ್ನು ಅಧ್ಯಯನ ಮಾಡಿದ್ದಾರೆ ಎಂದರು.

ಡಾ. ರವೀಂದ್ರನಾಥ ಕೆ. ಅವರು, ಡಾ. ಕೊಪ್ಪಾ ಅವರ ಇತರೆ ಕೃತಿಗಳ ಬಗ್ಗೆ ಮಾತನಾಡಿ, ಶರಣರ ಚರಿತ್ರೆಗಳನ್ನು ಬರೆಯುವಾಗ ಸಂಶೋಧನಾತ್ಮಕ ಲೇಖನಗಳನ್ನು ಬರೆದು ಸಾಹಿತ್ಯ ಕ್ಷೇತ್ರಕ್ಕೆ ಬೆಳಕು ಚಲ್ಲಿದವರು. ಹೀಗಾಗಿ ಕೊಪ್ಪಾ ಅವರ ಒಬ್ಬ ದಾರ್ಶನಿಕ ಮತ್ತು ವಿದ್ವಾಂಸರು ಎಂದು ಹೇಳಿದರೆ ಅತಿಶಯೋಕ್ತಿಯಾಗಲಾರದು ಎಂದು ಹೇಳಿದರು.

ವಿಚಾರ ಸಂಕಿರಣ ಕೇಂದ್ರ ಬಿಂದು ಡಾ. ಎಸ್.ಕೆ. ಕೊಪ್ಪ ಅವರು ಮಾತನಾಡಿ, ಡಾ. ಎಂ.ಎಂ. ಕಲಬುರ್ಗಿ, ಪ್ರೊ. ಎ.ಎಸ್. ಹಿಪ್ಪರಗಿ, ಪ್ರೊ. ಎನ್.ಜಿ. ಕರೂರಂತವರಿಂದ ಹೆಚ್ಚು ಕಲಿಯಲು ಸಾಧ್ಯವಾಯಿತು. ಪರಿಸರವು ಕೂಡಾ ನನಗೆ ಅಧ್ಯಯನ ಮಾಡಲು ಅನುಕೂಲವಾಗಿತ್ತು ಎಂದು ಕೃತಜ್ಞತಾ ಪೂರ್ವಕ ಮಾತುಗಳನ್ನಾಡಿದರು.

ಅಧ್ಯಕ್ಷ ಡಾ. ಕೃಷ್ಣ ಕೊಲ್ಹಾರಕುಲಕರ್ಣಿ ಅವರು ಮಾತನಾಡಿ, ಶರಣ ಸಾಹಿತ್ಯವು ಎಲ್ಲ ಸಾಹಿತ್ಯದ ಅಂಶಗಳು ಅದರಲ್ಲಿವೆ. ಕೊಪ್ಪಾ ಅವರು ಸಂಶೋಧನ ಮಾರ್ಗದರ್ಶಕರಾಗಿ ಒಳ್ಳೆಯ ಕೆಲಸ ಮಾಡಿದ್ದಾರೆಂದರು.

ಕೊನೆಗೆ ಸಂವಾದದಲ್ಲಿ ಭಾಗವಹಿಸಿದ ಡಾ. ಸಿದ್ದಣ್ಣ ಉತ್ನಾಳ, ಡಾ. ಎಂ.ಎಸ್. ಮಾಗಣಗೇರಿ, ಡಾ. ಉಷಾದೇವಿ ಹಿರೇಮಠ, ಡಾ. ವಿ.ಎಂ. ಬಾಗಾಯತ, ಡಾ. ಚೈತನಾ ಸಂಕೊಂಡ, ಶಾರದಾ ಐಹೊಳ್ಳಿ ಅವರು ಡಾ. ಕೊಪ್ಪಾ ಅವರ ಸಾಹಿತ್ಯಿಕ, ಕರ್ಯಗಳ ಕುರಿತು ಚರ್ಚಿಸಿ ಸಂವಾದವನ್ನು ಯಶಸ್ವಿಗೊಳಿಸಿದರು. ಡಾ. ವಿ.ಡಿ. ಐಹೊಳ್ಳಿ ಸಂವಾದ ಕಾರ್ಯಕ್ರಮ ನಡೆಸಿಕೊಟ್ಟರು. ಪ್ರೊ. ಅಮರೇಶ ಸಾಲಕ್ಕಿ ನಿರೂಪಿಸಿದರು. ಮನು ಪತ್ತಾರ ವಂದಿಸಿದರು. ಬಿ.ಎಂ. ಪಾಟೀಲ ವಚನಗಾಯನ ಮಾಡಿದರು. ಡಾ. ಎಂ.ಎಸ್. ಮದಭಾವಿ ಅತಿಥಿಗಳನ್ನು ಪರಿಚಯಿಸಿ ಪ್ರಾಸ್ತಾವಿಕ ಮಾತುಗಳನ್ನಾಡಿದರು.

ಕರ್ಯಕ್ರಮದಲ್ಲಿ ಪ್ರೊ. ಎನ್.ಜಿ.ಕರೂರ, ವಿ.ಸಿ. ನಾಗಠಾಣ, ಸಹದೇವ ನಾಡಗೌಡ, ಪ್ರೊ. ಎನ್.ಬಿ. ದೊಡಮನಿ, ಎಸ್. ಎನ್. ಶಿವಣಗಿ, ಎಸ್.ವಾಯ್. ಗದಗ, ಮಹಾದೇವ ಹಾಲಳ್ಳಿ, ಕೆ.ಎಸ್. ಬಿರಾದಾರ, ಸುಭಾಸ ಕನ್ನೂರ, ಎನ್. ಕೆ. ಕುಲಕರ್ಣಿ, ಪಿ.ಎಸ್. ಕನಮಡಿ, ಎಸ್.ಎಸ್. ಮಜ್ಜಗಿ, ಎಂ.ಆಯ್. ಮದಭಾವಿ, ಡಾ. ಎಸ್.ಎಸ್. ತರಡಿ, ಕೊಪ್ಪಾ ಅವರ ಕುಟುಂಬ ಮತ್ತು ಜೆ.ಎಸ್.ಎಸ್., ಬಂಜಾರಾ, ಎಸ್. ಎಂ.ಆರ್.ಕೆ. ಪ್ರೆಸಿಡೆನ್ಸಿ, ಅಂಜುಮನ ಬಿ.ಇಡಿ. ಕಾಲೇಜುಗಳ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಯುಥ್ ಕರೇಜ್ ಅಸೋಸಿಯೇಶನ್ ಸಮಿತಿಯಿಂದ ಬೃಹತ್ ಪ್ರತಿಭಟನೆ



**ಇಂಡಿ :** ಮಹಾರಾಷ್ಟ್ರ ರಾಜ್ಯದ ಸಾಂಗ್ಲಿ ಜಿಲ್ಲೆಯ ಕಜ9ಗಿಯಲ್ಲಿ ನಾಲ್ಕು ವಷ9ದ ಬಾಲಕಿಯನ್ನು ಪಾಂಡುರಂಗ ಎಂಬ ವ್ಯಕ್ತಿ ಆ ಬಾಲಕಿಯನ್ನು ಪತ್ರಾ ಶೆಡ್ ನಲ್ಲಿ ಕರೆದೊಯ್ದು ಅತ್ಯಾಚಾರ ಮಾಡಿ ,ನಂತರ ಕೊಲೆಗೈದು ಪೆಟ್ಟಿಗೆಯಲ್ಲಿ ಮುಚ್ಚಿಟ್ಟ ಘಟನೆಯೊಂದು ನಡೆದಿದೆ.ಇಂತಹ ಅತ್ಯಾಚಾರ ಮಾಡಿದ ಆರೋಪಿಗೆ ಗಲ್ಲುಶಿಕ್ಷೆಗೆಗುರಿಪಡಿಸಬೇಕೆಂದುಇಂದುವಿಜಯಪುರ ಜಿಲ್ಲೆಯ ಇಂಡಿ ಪಟ್ಟಣದಲ್ಲಿ "ಇಂಡಿ ಯುಥ್ ಕರೇಜ್ ಅಸೋಸಿಯೇಶನ್"ಸಮೀತಿಯಿಂದ ಬೃಹತ್ ಪ್ರಮಾಣದಲ್ಲಿ ಪ್ರತಿಭಟನೆ ಮಾಡಲಾಯಿತು.

ಈ ಪ್ರತಿಭಟನೆಯು ಪಟ್ಟಣದ ಪ್ರವಾಸಿ ಮಂದಿರದಿಂದ ಬಸವೇಶ್ವರ ವೃತ್ತದ ಮಾರ್ಗವಾಗಿ ಶಾಂತಿಯುತವಾಗಿ ಮಿನಿ ವಿಧಾನಸೌಧದ ಎದುರು ಕೆಲ ಸಮಯದವರೆಗೆ ಧರಣಿ ಕೂಡಲಾಯಿತು. ಈ ಪ್ರತಿಭಟನೆಯನ್ನುದ್ದೇಶಿಸಿ ಸಾಮಾಜೀಕ ಹೋರಾಟಗಾರರಾದ ಅಯೂಬ್ ನಾಟಿಕಾರ ಅವರು ಮಾತನಾಡಿ– ಜಗತ್ತಿನಲ್ಲಿಯೆ ವಿವಿಧತೆಯಿಂದ ಕೂಡಿದ ಸರ್ವಶ್ರೇಷ್ಠ ದೇಶ ಅಂದರೆ ಅದು ನಮ್ಮ ದೇಶ.

ಇಂತಹ ದೇಶದಲ್ಲಿ ಮಾನವೀಯತೆ ಮೌಲ್ಯಕ್ಕೆ ಹೆಚ್ಚಿನ ಪ್ರಾಮುಖ್ಯತೆ ಇರಬೇಕು.ಮಾನವೀಯತೆಯ ಮೌಲ್ಯಕ್ಕೆ ಧಕ್ಕೆ ತರುವ ಯಾವುದೇ ಧರ್ಮದ ,ಯಾವುದೇ ಜನಾಂಗದ ದರೀದ್ರರಿಗೆ ಇಂಚಿಂಚು ಕಡಿಯಬೇಕು.ನಾವೇಲ್ಲರೂಮನುಷ್ಯರುಮನುಷ್ಯರಾಗಿ ಬಾಳಬೇಕು.ಕಾಡುಮೃಗಗಳಾಗಬಾರದು,ಅದೇ ರೀತಿ ನಾಲ್ಕು ವಷ9ದ ಬಾಲಕಿಯನ್ನು ಅತ್ಯಾಚಾರ ಮಾಡಿದ ಆರೋಪಿಗೆ ಆದಷ್ಟು ಬೇಗನೆ ಗಲ್ಲು ಶಿಕ್ಷೆಯಾಗಬೇಕು.ಆ ಗಲ್ಲು ಶಿಕ್ಷೆ ಇಡೀ ಜಗತ್ತು ನೋಡುವಂತಾಗಬೇಕು. ಆವಾಗ ಮಾತ್ರ ಅತ್ಯಾಚಾರಿಗಳಿಗೆ ಕಡಿವಾಣ ಬೀಳಲು ಸಾಧ್ಯ ಎಂದು ಹೇಳಿದರು. ನಂತರ ಆರ್ ಪಿ ಐ(ಅ) ಅಧ್ಯಕ್ಷರಾದ ನಾಗೇಶ ತಳಕೇರಿಯವರು ಮಾತನಾಡಿ– ತಪ್ಪು ಮಾಡುವ ಅತ್ಯಾಚಾರಿಗಳು ಯಾರೆ ಆಗಿರಲಿ ಅಂತಹ ಅತ್ಯಾಚಾರಿಗಳನ್ನು ಸಾರ್ವಜನಿಕರ ಕೈಯಲ್ಲಿ ಶಿಕ್ಷಿಸುವಂತೆ ಸರ್ಕಾರ ಕೊಡಬೇಕು ಆವಾಗ ಗೊತ್ತಾಗುತ್ತದೆ ತಪ್ಪು ಮಾಡಿದ ವ್ಯಕ್ತಿಗೆ ನರಕಯಾತನೆ ಎಂತಹದ್ದು ಅಂತ.ನಮ್ಮ ಹೋರಾಟ ಆತನಿಗೆ ಗಲ್ಲು ಶಿಕ್ಷೆಗೆ ಗುರಿಪಡಿಸುವವರೆಗೂ ಮುಂದುವರೆಯುತ್ತದೆ ಎಂದು ಹೇಳಿದರು.

ಮನವಿಯನ್ನು ಮಾನ್ಯ ಉಪವಿಭಾಗಾಧಿಕಾರಿ ಇಂಡಿ ಇವರ ಮುಖಾಂತರ ಮಾನ್ಯ ಘನವೆತ್ತ ರಾಜ್ಯಪಾಲರಿಗೆ ಸಲ್ಲಿಸಲಾಯಿತು.ಈ ಸಂದರ್ಭದಲ್ಲಿ ವಿವಿಧ ಸಂಘಟನೆಯ ಸಂಘಟನಾ ಕಾರರು ಭಾಗಿಯಾಗಿದ್ದರು.

# ಕಾಂಗ್ರೆಸ ತೆಕ್ಕೆಗೆ ಕೊಲ್ಹಾರ ಪ.ಪಂ: ಅಧ್ಯಕ್ಷ, ಉಪಾಧ್ಯಕ್ಷ ಅವಿರೋಧ ಆಯ್ಕೆ


**ವರದಿ:ಲಾಲಸಾಬ ಸವಾರಗೋಳ**

**ವಿಜಯಪುರ :** ನಿರೀಕ್ಷೆಯಂತೆ ಜಿಲ್ಲೆಯ ಕೊಲ್ಹಾರ ಪಟ್ಟಣ ಪಂಚಾಯಿತಿ ಅಧ್ಯಕ್ಷ, ಉಪಾಧ್ಯಕ್ಷ ಆಯ್ಕೆ ಪ್ರಕ್ರಿಯೆಯಲ್ಲಿ ಕಾಂಗ್ರೆಸ ಮೇಲುಗೈ ಸಾಧಿಸಿ ಅಧಿಕಾರ ಚುಕ್ಕಾಣಿ ಹಿಡಿಯಿತು.

ಬುಧವಾರ ಜರುಗಿದ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಕಾಂಗ್ರೆಸ ಬೆಂಬಲಿತ 4ನೇ ವಾರ್ಡಿನ ಪಕ್ಷೇತರ ಸದಸ್ಯ ಚನ್ನಮಲ್ಲಪ್ಪ ಗಿಡ್ಡಪ್ಪಗೋಳ. ಉಪಾಧ್ಯಕ್ಷರಾಗಿ 9ನೇ ವಾರ್ಡಿನ ಕಾಂಗ್ರೆಸ ಸದಸ್ಯೆ ರಾಜಮಾ ನದಾಫ ಅವಿರೋಧವಾಗಿ ಆಯ್ಕೆಯಾದರು.

ಕೊಲ್ಹಾರ ಪ.ಪಂ ಅಧ್ಯಕ್ಷ ಸ್ಥಾನ ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದರೆ, ಉಪಾಧ್ಯಕ್ಷ ಸ್ಥಾನ ಸಾಮಾನ್ಯ "ಮಹಿಳೆ"ಗೆ ಮೀಸಲಾಗಿತ್ತು.

ಒಟ್ಟು 17 ಸದಸ್ಯರ ಬಲಾಬಲದ ಕೊಲ್ಹಾರ ಪಟ್ಟಣ ಪಂಚಾಯಿತಯಲ್ಲಿ 11 ಕಾಂಗ್ರೆಸ, 2 ಎಐಎಂಐಎಂ, 1 ಪಕ್ಷೇತರ ಬೆಂಬಲ ಸೇರಿ ಒಟ್ಟು14 ಸದಸ್ಯರ ಸ್ಪಷ್ಟಬಹುಮತದೊಂದಿಗೆ ಕಾಂಗ್ರೆಸ ಅಧಿಕಾರದ ಚುಕ್ಕಾಣಿ ಹಿಡಿಯಿತು. ಮೂವರು ಬಿಜೆಪಿ ಸದಸ್ಯರು ಚುನಾವಣಾ ಪ್ರಕ್ರಿಯೆಯಿಂದ ದೂರ ಉಳಿದಿದ್ದರು.



**ಅಧ್ಯಕ್ಷ ಸ್ಥಾನಕ್ಕೆ ಚನ್ನಮಲ್ಲಪ್ಪ ಗಿಡ್ಡಪ್ಪಗೋಳ, ಉಪಾಧ್ಯಕ್ಷ ಸ್ಥಾನಕ್ಕೆ ರಾಜಮಾ ನದಾಫ ಮಾತ್ರ ನಾಮಪತ್ರ ಸಲ್ಲಿಸಿದ್ದು ಅವರ ವಿರುದ್ಧವಾಗಿ ಯಾರು ನಾಮಪತ್ರ ಸಲ್ಲಿಸದ ಕಾರಣ ಈರ್ವರು ಅಧ್ಯಕ್ಷ, ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು ಎಂದು ಚುನಾವಣಾಧಿಕಾರಿಗಳಾದ ತಹಶೀಲ್ದಾರ ಎಸ್.ಎಸ್ ನಾಯಕಲಮಠ ಘೋಷಿಸಿದರು.**

ಅಧ್ಯಕ್ಷ, ಉಪಾಧ್ಯಕ್ಷರಾಗಿ ಆಯ್ಕೆಯಾದ ಚನ್ನಮಲ್ಲಪ್ಪ ಗಿಡ್ಡಪ್ಪಗೋಳ ಹಾಗೂ ರಾಜಮಾ ನದಾಫ ಅವರನ್ನು ಸಚಿವ ಶಿವಾನಂದ ಪಾಟೀಲ ಈ ಸಂದರ್ಭದಲ್ಲಿ ಸನ್ಮಾನಿಸಿದರು.

ವಿಜಯೋತ್ಸವ: ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಕಾಂಗ್ರೆಸ ಮುಖಂಡರು, ಕಾರ್ಯಕರ್ತರು ಪಟಾಕಿ ಸಿಡಿಸಿ, ಗುಲಾಲು ಎರಚಿ ಸಂಭ್ರಮಾಚರಣೆ ನಡೆಸಿದರು.

**ಸಚಿವ ಶಿವಾನಂದ ಪಾಟೀಲರ ಶ್ರಮದಿಂದ ಕೊಲ್ಹಾರ ಪಟ್ಟಣ ಶರವೇಗದಲ್ಲಿ ಅಭಿವೃದ್ಧಿ ಪಥದತ್ತ ಸಾಗುತ್ತಿದ್ದು. ಸರ್ವ ಸದಸ್ಯರ ಬೆಂಬಲದೊಂದಿಗೆ ನೂತನ ಅಧ್ಯಕ್ಷ, ಉಪಾಧ್ಯಕ್ಷರಾದವರು ಸಚಿವರ ಜೊತೆ ಕೈ ಜೊಡಿಸಿ ಪಟ್ಟಣದ ಅಭಿವೃದ್ಧಿಗೆ ಶ್ರಮಿಸುತ್ತಾರೆ ಎನ್ನುವ ನಂಬಿಕೆಯಿದೆ.**

**। ಕಲ್ಲು ದೇಸಾಯಿ.**
**ಮಾಜಿ ಜಿ.ಪಂ ಸದಸ್ಯರು.**

ಈ ಸಂದರ್ಭದಲ್ಲಿ ಮಾಜಿ ಜಿ.ಪಂ ಸದಸ್ಯ ಕಲ್ಲು ದೇಸಾಯಿ, ಬ್ಲಾಕ್ ಕಾಂಗ್ರೆಸ ಅಧ್ಯಕ್ಷ ಆರ್.ಬಿ ಪಕಾಲಿ, ಮಹೇಶ ಗಿಡ್ಡಪ್ಪಗೋಳ, ತಾನಾಜಿ ನಾಗರಾಳ, ಸುರೇಶ ಹಾರಿವಾಳ ಪ ಪಂ ಸದಸ್ಯರು ಕಾಂಗ್ರೆಸ ಮುಖಂಡರು ಹಾಗೂ ಇನ್ನಿತರರು ಇದ್ದರು.

# ಸುನಂದಾಗೆ ಈಶ್ವರಮ್ಮ ರಾಜ್ಯ ಪ್ರಶಸ್ತಿ ಪ್ರದಾನ

**ವಿಜಯಪುರ :** ಬೆಂಗಳೂರಿನ ವೈಟ್ ಫೀಲ್ಡನಲ್ಲಿರುವ ಶ್ರೀ ಸತ್ಯ ಸಾಯಿ ಆಶ್ರಮದಲ್ಲಿ ಈಶ್ವರಮ್ಮ ರಾಜ್ಯ ಪ್ರಶಸ್ತಿಯನ್ನು ವಿಜಯಪುರದ ಉಜ್ವಲ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಸುನಂದಾ ತೋಳಬಂದಿ ಅವರಿಗೆ ಫೆ.9ರಂದು ಪ್ರದಾನ ಮಾಡಲಾಯಿತು. ಸಾಮಾಜಿಕ ಕ್ಷೇತ್ರದಲ್ಲಿ ತೊಳಬಂದಿ ಅವರ ಗಣನೀಯ ಸೇವೆಯನ್ನು ಪರಿಗಣಿಸಿ ಬೆಂಗಳೂರಿನ ಶ್ರೀ ಸತ್ಯಸಾಯಿ ಸಂಸ್ಥೆಯವರು ತೋಳಬಂದಿ ಅವರಿಗೆ ಶಾಲು ಹೊದಿಸಿ ಫಲಪುಷ್ಪ ನೀಡಿ ಈಶ್ವರಮ್ಮ ರಾಜ್ಯ ಪ್ರಶಸ್ತಿಯನ್ನು ಪ್ರದಾನ ಮಾಡಿ ಗೌರವಿಸಿದ್ದಾರೆ.



ವೇದಿಕೆಯ ಮೇಲೆ ಲೆಫ್ಟಿನಂಟ್ ಜನರಲ್ ಡಾ. ಮಾಧುರಿ ಕಾನಿತ್ಕರ, ಹಿಮಾವಾಹಿನಿ ರತ್ನಾಕರ, ಪ್ರಿಯಾ ಪೈ, ನಿರ್ಮಲ ಮೂರ್ತಿ, ಶಮಂತಕಮಣಿ ಭಾಷ್ಯಂ ಇದ್ದರು.

# ಕಸಾಪ ಕನ್ನಡಿಗರ ಶಕ್ತಿ ಕೇಂದ್ರ: ಡಾ. ಮಲ್ಲಿಕಾರ್ಜುನ ಮೇತ್ರಿ

**ವಿಜಯಪುರ :** ಕನ್ನಡ ಸಾಹಿತ್ಯ ಪರಿಷತ್ತು ಕನ್ನಡಿಗರ ಶಕ್ತಿ ಕೇಂದ್ರ, ಈ ಶಕ್ತಿ ಕೇಂದ್ರದ ರೂವಾರಿಗಳು ಹಾಸಿಂಪೀರ ವಾಲೀಕಾರ ಆಗಿದ್ದಾರೆ. ಎಲ್ಲ ಜಾತಿ ಧರ್ಮಗಳ ಜನರನ್ನು ಸಾಹಿತ್ಯ ಪರಿಷತ್ತಿಗೆ ಕರೆ ತರುತ್ತಾರೆ. ಇದರಿಂದ ಸಾಹಿತ್ಯ ಪರಿಷತ್ತು ಪ್ರತಿಯೊಬ್ಬ ಕನ್ನಡಿಗನ ನೆಲೆಯಾಗಿದೆ. ಸಾಹಿತ್ಯ ಪರಿಷತ್ತಿಗೆ ಎಲ್ಲರನ್ನೂ ಒಂದುಗೂಡಿಸುವ ಶಕ್ತಿ ಇದೆ. ಇದರಿಂದ ವಿಜಯಪುರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಸಾಮರಸ್ಯದ ಕೇಂದ್ರವಾಗಿದೆ ಎಂದು ಡಾ ಮಲ್ಲಿಕಾರ್ಜುನ ಮೇತ್ರಿ ಹೇಳಿದರು.



ರವಿವಾರಜಿಲ್ಲಾಕಸಾಪಭವನದಲ್ಲಿ ಜರುಗಿದ ಡಾ ರಾಮರಾವ ಮಲ್ಲಾರಾವನಾಡಗೀರದತ್ತಿಮತ್ತು ಗೌರಮ್ಮ ಸಿದ್ರಾಮಪ್ಪ ವಾಡೇದ ದತ್ತಿ ಕಾರ್ಯಕ್ರಮ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಸಾಹಿತ್ಯ ಪ್ರತಿಯೊಬ್ಬ ಕನ್ನಡಿಗನ ಆಸ್ತಿ, ಉತ್ತರ ಕರ್ನಾಟಕದ ತುಂಬ ಕನ್ನಡದ ಕಂಪು ಹರಿಸಿದ ಕೀರ್ತಿ ವಿಜಯಪುರ ಜಿಲ್ಲೆಗೆ ಇದೆ. ಅದನ್ನು ಇಂದು ಕನ್ನಡ ಸಾಹಿತ್ಯ ಪರಿಷತ್ತು ಮುಂದೆವರಿಸಿಕೊಂಡು ಬಂದಿರುವದು ಬಹಳ ಸಂತೋಷ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ್ದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕೋಶಾಧ್ಯಕ್ಷ ಡಾ. ಸಂಗಮೇಶ ಮೇತ್ರಿ ಮಾತನಾಡಿ, ಈ ನಾಡು ಸರ್ವ ಜನಾಂಗದ ಶಾಂತಿಯ ತೋಟ ಆಗಬೇಕಾದರೆ ಬುದ್ಧ, ಬಸವ, ಅಂಬೇಡ್ಕರ ತತ್ವಗಳನ್ನು ಪ್ರಾಮಾಣಿಕವಾಗಿ ಒಪ್ಪಿಕೊಳ್ಳಬೇಕೆಂದರು.

ಅಧಿಕಾರದಆಸೆಗಾಗಿಮುಖವಾಡ ಧರಿಸುವವರನ್ನು ವರಕವಿ ಬೇಂದ್ರೆ ಹಾಗೂ ದಲಿತ ಕವಿ ಸಿದ್ದಲಿಂಗಯ್ಯ ಕಟುವಾಗಿ ಟೀಕಿಸಿದ್ದಾರೆ ಎಂದರು.

ಒಂದನೇ ದತ್ತಿ ಉಪನ್ಯಾಸಕರಾಗಿ ಆಗಮಿಸಿದ ಸಾಹಿತಿ ಶಿಲ್ಪಾ ಭಸ್ಮೆ ಅವರು ಬೇಂದ್ರೆಯವರ ಸಾಹಿತ್ಯ ಮತ್ತು ಬದುಕು ಕುರಿತು ಮಾತನಾಡುತ್ತ ಬೇಂದ್ರೆ ಸಾಮರಸ್ಯ ಜೀವನದ ಕೊಂಡಿ. ಬದುಕಿಗೆ ಸಮೀಪದ ಸಾಹಿತ್ಯ ನೀಡಿದ ಮಹಾನ ಕವಿ ಬೇಂದ್ರೆ ಆಗಿದ್ದಾರೆ. ಮಾತೃಭಾಷೆ ಮರಾಠಿಯಿಂದ ಬಂದು ಕನ್ನಡದಲ್ಲಿ ಅದ್ಭುತ ಕಾವ್ಯ ರಚನೆ ಮಾಡಿದ್ದು ಅಲ್ಲದೆ ಕನ್ನಡಕ್ಕೆ ಜ್ಞಾನಪೀಠ ಪ್ರಶಸ್ತಿ ತಂದ ಮಹಾನ ಚೇತನ ಎಂದರು.

ಎರಡನೇ ಉಪನ್ಯಾಸಕ್ಕೆ ಆಗಮಿಸಿದ ವಿಜಯಪುರ ಜಿಲ್ಲೆಯಲ್ಲಿ ಹೋರಾಟಗಾರ ಮತ್ತು ಜಿಲ್ಲಾ ಕಸಾಪ ಸಂಘಟನಾ ಕಾರ್ಯದರ್ಶಿ ಅಭಿಷೇಕ ಚಕ್ರವರ್ತಿ ಅವರು ಮಾತನಾಡಿ, ಸಿದ್ದಲಿಂಗ ಅವರು ಕಳೆದ ಶತಮಾನದ ಎಂಬತ್ತರ ದಶಕದಲ್ಲಿ ದಲಿತರ ಧ್ವನಿಯಾಗಿ ನಾಡಿನ ತುಂಬ ಹೋರಾಟದ ಮೂಲಕ ದಲಿತರ ಬದುಕು ಸ್ವಚ್ಛ ಮಾಡಲು ಹೋರಾಡಿದವರು,

ಎರಡು ಬಾರಿ ಶಾಸಕರಾಗಿ ದಲಿತರಿಗೆ ಮಹಿಳೆಯರಿಗೆ ಅಂಗವಿಕಲರಿಗೆ ಸಿಗಬೇಕಾದ ಸವಲತ್ತುಗಳು ಕೊಡಲು ಹೊರಾಡಿದ ಮಹಾನ ಚೇತನ, ಬುದ್ಧ ಬಸವ ಅಂಬೇಡ್ಕರ್ ಅವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡವರು ಎಂದರು.

ವೇದಿಕೆಯ ಮೇಲೆ ಪ್ರೊ. ಆರ್.ಸಿ. ವಾಡೇದ, ಶಾರದಾ ನಾಯಕ, ಶಾರದಾ ಲಮಾಣಿ ಉಪಸಿತರಿದ್ದರು. ಮೊದಲಿಗೆ ಡಾ. ಆನಂದ ಕುಲಕರ್ಣಿ ಪ್ರಾಸ್ತಾವಿಕವಾಗಿಮಾತನಾಡಿದರು, ಪರವೀನ ಶೇಖ ಸ್ವಾಗತಿಸಿ ಗೌರವಿಸಿದರು ವಿಜಯಲಕ್ಷ್ಮಿ ಹಳಕಟ್ಟಿನಿರೂಪಿಸಿದರು, ಶೋಭಾ ಬಡಿಗೇರ ವಂದಿಸಿದರು.

ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಹಾಸಿಂಪೀರ ವಾಲೀಕಾರ, ಡಾ. ಮಾಧವ ಗುಡಿ, ಜಯಶ್ರೀ ಹಿರೇಮಠ, ಅರ್ಜುನ ಶಿರೂರ, ಲತಾ ಗುಂಡಿ, ರಾಜಾಸಾಬ ಶಿವನಗುತ್ತಿ, ಬಿ.ಎಂ. ಆಜೂರ, ಎಸ್ ಎಲ್ ಇಂಗಳೇಶ್ವರ, ಡಾ ಮಹಿಬೂಬ ತಾಲಬಾವಡಿ, ಅರ್ಜುನ ಶಿರೂರ. ಓ.ಆರ್. ಹಾವಿನಾಳ. ಜಿ.ಎಸ್. ಬಳ್ಳೂರ. ಸಿದ್ರಾಮಪ್ಪ ಜಂಗಮಶೆಟ್ಟಿ, ಅಣ್ಣುಗೌಡ ಬಿರಾದಾರ, ವೈ. ಎಚ್. ಲಂಬು. ಭೀಮಪ್ಪ ಮಸಬಿನಾಳ, ಭಾಗೀರಥಿ ಸಿಂದೆ, ಸಹನಾ ಬಿರಾದಾರ, ಗಂಗಮ್ಮ ರಡ್ಡಿ. ಪಕುರುದ್ದೀನ ಹಿರೇಕೊಪ್ಪ, ಶ್ರೀಕಾಂತ ನಾಡಗೌಡ, ಸದಾಶಿವ ಅಂಗಡಿ, ಮಂಜುಳಾ ಅಂಗಡಿ, ಎನ್.ಎಮ್. ಹರನಾಳ, ಶಿವಾಜಿ ಮೋರೆ, ಅಲಿಖಾನ ಪಠಾಣ ಮುಂತಾದವರು ಉಪಸ್ಥಿತರಿದ್ದರು.

# ಸ್ಮಾರ್ಟ್ ತೋಟಗಾರಿಕೆ ಇಂದಿನ ಆದ್ಯತೆ – ಪ್ರೊ. ಮಿಕ್ಕೊ ರುಹೋನೆನ್, ಅಧ್ಯಕ್ಷರು, ನಾರ್ಡಿಕ್ ಕೇಂದ್ರ, ಫಿನಲ್ಯಾಂಡ್ ಅಭಿಮತ

**ಬಾಗಲಕೋಟೆ :** ಇಂದು ದಿನಾಂಕ: 12.02.2025 ರಂದು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಮುಖ್ಯ ಆವರಣದಲ್ಲಿ ತೋಟಗಾರಿಕೆ ಮಹಾವಿದ್ಯಾಲಯ, ಬಾಗಲಕೋಟ ವತಿಯಿಂದ ಆಯೋಜಿಸಲಾದ "ಸಮೃದ್ಧಿ ಮತ್ತು ಪೌಷ್ಠಿಕಾಂಶಗಳ ಭದ್ರತೆಗಾಗಿ ಸ್ಮಾರ್ಟ್ ತೋಟಗಾರಿಕಾ ತಂತ್ರಜ್ಞಾನದ ಜಾಗತಿಕ ಸಮ್ಮೇಳನ"ದ ಉದ್ಘಾಟನಾ ಕಾರ್ಯಕ್ರಮವನ್ನುಜ್ಯೋತಿಬೆಳಗಿಸುವುದರ ಮೂಲಕ ಅತಿ ವಿಜೃಂಭಣೆಯಿಂದ ನೇರವೇರಿಸಲಾಯಿತು.



ಸಮ್ಮೇಳನದ ಉದ್ಘಾಟಕರಾದ ಪ್ರೊ. ಮಿಕ್ಕೊ ರುಹೋನೆನ್, ಅಧ್ಯಕ್ಷರು, ನಾರ್ಡಿಕ್ ಕೇಂದ್ರ, ಫಿನಲ್ಯಾಂಡ್ ರವರು ಉದ್ಘಾಟನಾ ಭಾಷಣದಲ್ಲಿ ಮಾತನಾಡಿ ವಿಶ್ವದಾದ್ಯಂತ ತೋಟಗಾರಿಕೆಹಾಗೂಕೃಷಿಗೆಸಂಬಂಧಪಟ್ಟ ಸಂಶೋಧನೆಯ ಕುರಿತು ಸಂಯುಕ್ತವಾಗಿ ಕೈಗೊಳ್ಳಬಹುದಾದ ಯೋಜನೆಗಳ ಪ್ರಾಮುಖ್ಯತೆಯ ಬಗ್ಗೆ ಒತ್ತು ನೀಡಿದರು. ಈ ದಿಸೆಯಲ್ಲಿ ಈಗಾಗಲೇ ಕೈಗೊಳ್ಳಲಾದ ಕೆಲವು ಪ್ರಮುಖ ಯೋಜನೆಗಳಾದ ಪರಸ್ಪರ ಸಂಸ್ಥೆಗಳ ವಿಜ್ಞಾನಿಗಳು, ವಿದ್ಯಾರ್ಥಿಗಳು ಅವರ ಸಂಸ್ಥೆಗಳಿಗೆ ನೀಡಿರುವ ಭೇಟಿಯ ಬಗ್ಗೆ ಅತಿ ಹರ್ಷವಾಗಿ ಅಭಿಪ್ರಾಯವನ್ನು ಹಂಚಿಕೊಂಡರು. ಈ ಸಂದರ್ಭದಲ್ಲಿ ತೋ.ವಿ.ವಿ. ಯ ವಿಜ್ಞಾನಿಗಳು ಹಾಗೂ ವಿದ್ಯಾರ್ಥಿಗಳು ಫಿನ್‌ಲ್ಯಾಂಡ ದೇಶಕ್ಕೆ ಭೇಟಿ ನೀಡಿರುವ ಕ್ಷಣಗಳನ್ನು ನೆನಪಿಸಿಕೊಂಡರು.

ಸಮ್ಮೇಳನದ ಅಧ್ಯಕ್ಷತೆಯನ್ನು ವಹಿಕೊಂಡಂತಹ ತೋ.ವಿ.ವಿ., ಯ ಕುಲಪತಿಗಳಾದ ಡಾ. ವಿಷ್ಣುವರ್ಧನ ರವರು ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ಈ ಸಮ್ಮೇಳನವು ಒಂದು ಮಹತ್ವದ ಘಟನೆ ಎಂದು ಬಣ್ಣಿಸುತ್ತಾ ತೋಟಗಾರಿಕೆ ವಿಜ್ಞಾನಗಳ ಸ್ಮಾರ್ಟ್ ತಂತ್ರಜ್ಞಾನಗಳನ್ನು ಅಭಿವೃದ್ಧಿ ಪಡಿಸಲು ಕರೆಕೊಟ್ಟರು. ದೇಶ ವಿದೇಶಗಳಿಂದ ಆಗಮಿಸಿರುವ ಗಣ್ಯರಿಗೆ, ವಿಜ್ಞಾನಿಗಳಿಗೆ, ಸಂಶೋಧಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಪ್ರಸಕ್ತ ಸಮ್ಮೇಳನವು ತೋಟಗಾರಿಕೆಯಲ್ಲಿ ಅಳವಡಿಸಿಕೊಳ್ಳಬಹುದಾದ ಇತ್ತೀಚಿನ ಸಂಶೋಧನಾ ಫಲಿತಾಂಶಗಳು ಮುಂದು ಕೈಗೊಳ್ಳಬಹುದಾದ ಸಂಶೋಧನೆಗಳ ಬಗ್ಗೆ ಚರ್ಚಿಸಲು ಒಂದು ಉತ್ತಮ ವೇದಿಕೆಯಾಗಿದ್ದು, ಪ್ರಸ್ತುತ ಮೂರು ದಿನಗಳ ಸಮ್ಮೇಳನದ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ತೋ.ವಿ.ವಿ., ಬಾಗಲಕೋಟೆಯ ಸಂಸ್ಥಾಪಕ ಕುಲಪತಿಗಳಾದ ಡಾ. ಎಸ್. ಬಿ. ದಂಡಿನ ರವರು ತೋಟಗಾರಿಕಾ ವಿವಿಧ ಬೆಳೆಗಳ ಜೈವಿಕ ವೈವಿಧ್ಯತೆಯ ಮಹತ್ವ, ಸಂರಕ್ಷಣೆ ಹಾಗೂ ಅವುಗಳ ಅಭಿವೃದ್ಧಿಯ ಬಗ್ಗೆ ಗಮನಹರಿಸುವುದು ಮುಖ್ಯ ಎಂದು ತಿಳಿಸಿದರು.

ಡಾ. ಮಿಕೊ ಆಹೋನೆನ್ ರವರು ಫೀನ್‌ಲ್ಯಾಂಡ್ ದೇಶದಿಂದ ಹಾಗೂ ಡಾ. ಕ್ರೀಸ್ಟೇಬಲ್ ರಾಯನ್, ಅಧ್ಯಕ್ಷರು ನಾರ್ಡಿಕ್ ಸೆಂಟರ್,ನವದೆಹಲಿರವರುಅಂತರ್ಜಾಲದ ಮೂಲಕ ಸಭೆಯನ್ನುದ್ದೇಶಿಸಿ ಮಾತನಾಡಿ ಸಮ್ಮೇಳನದ ಆಯೋಜಕರಿಗೆ ಅಭಿನಂದನೆಯನ್ನು ಸಲ್ಲಿಸಿದರು.

ಸಭೆಯನ್ನುದ್ದೇಶಿಸಿ ಡಾ. ಟಿ. ಜಾನಕಿರಾಮ, ನಿವೃತ ಸಹಾಯಕ ನಿರ್ದೇಶಕರು, ಭಾ. ಕೃ.ಅ.ಸಂ. ಪರಿಷತ್, ನವದೆಹಲಿ, ತೋ.ವಿ.ವಿ., ಯ ಆಡಳಿತ ಮಂಡಳಿಯ ಸದಸ್ಯರುಗಳಾದ ಡಾ. ಎಸ್.ಎನ್. ವಾಸುದೇವನ ಮತ್ತು ಶ್ರೀ. ಹೆಚ್.ಜೆ. ಮನೋಹರ್ ರವರು ಮಾತನಾಡಿದರು.

ಸಮ್ಮೇಳನದವಿಷಯಕ್ಕೆಸಂಬಂಧಿಸಿದವಿವಿಧ ವಿಜ್ಞಾನಿಗಳ ಸಂಶೋಧನಾ ಫಲಿತಾಂಶಗಳ ಪ್ರಕಟಣೆಗಳಾದಅಬ್‌ಸ್ಟ್ರಾಕ್ಟ್,ಕೀ–ನೋಟ್, ಲೀಡ್‌ಟಾಕ್ಸ್‌ಗಳ ಕಿರು ಹೊತ್ತಿಗೆಗಳನ್ನು ಬಿಡುಗಡೆಗೊಳಿಸಲಾಯಿತು. ಈ ಜಾಗತಿಕ ಸಮ್ಮೇಳನದಲ್ಲಿ ವಿವಿಧ ರಾಜ್ಯಗಳ ಹಾಗೂ ಹೊರ ದೇಶಗಳಿಂದ ಸುಮಾರು 1050 ಕ್ಕೂ ಹೆಚ್ಚು ವಿಜ್ಞಾನಿಗಳು ಆಫ್‌ಲೈನ್/ಆನ್‌ಲೈನ್ ಮೂಲಕ ಭಾಗವಹಿಸಿರುತ್ತಾರೆ.

ನ್ಯಾಷನಲ್ ಗ್ಲ್ಯಾಡಿಯೋಲಸ್ ಟ್ರಸ್ಟ್, ಜಮ್ಮು, ಕಾಶ್ಮೀರ ವತಿಯಿಂದ ಕೃಷಿ/ ತೋಟಗಾರಿಕೆ ವಿವಿಧ ವಿಷಯಗಳಲ್ಲಿ ಸಾಧನೆ ಗೈದ ವಿಜ್ಞಾನಿಗಳಿಗೆ ಹಾಗೂ ಸಂಶೋಧನಾ ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಆಡಳಿಡ ಮಂಡಳಿಯ ಸದಸ್ಯರಾದ ಡಾ. ಅನಿತಾ, ಶ್ರೀ. ಮಹಾಂತೇಶಗೌಡ ಬಿ. ಪಾಟೀಲ್, ಡಾ. ತಮ್ಮಯ್ಯ ಎನ್. ಹಾಗೂ ಡಾ. ಮನೋಜ ನಾಜೀರ್ ಅಧ್ಯಕ್ಷರು, ಎನ್.ಜಿ.ಟಿ. ಜಮ್ಮು ಮತ್ತು ಕಾಶ್ಮೀರ, ಶ್ರೀ. ಮಂಜುನಾಥರೆಡ್ಡಿ, ಡಿ.ಡಿ.ಎಂ. ನಬಾರ್ಡ್ ಹಾಗೂ ವಿಶ್ವವಿದ್ಯಾಲಯದ ಎಲ್ಲಾ ಅಧಿಕಾರಿಗಳು, ವಿವಿಧ ಮಹಾವಿದ್ಯಾಲಯಗಳ ಡೀನ್ ರವರು, ವಿಜ್ಞಾನಿಗಳು, ಶಿಕ್ಷಣ ತಜ್ಞರು, ಸಂಶೋಧನಾ ವಿದ್ವಾಂಸರು, ಉದ್ಯಮಿಗಳು, ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಡಾ. ಬಾಲಾಜಿ ಎಸ್. ಕುಲಕರ್ಣಿ, ಸಮ್ಮೇಳನದ ಸಂಘಟನಾ ಕಾರ್ಯದರ್ಶಿ ಹಾಗೂ ಡೀನ್, ತೋಟಗಾರಿಕಾ ಮಹಾವಿದ್ಯಾಲಯ, ಬಾಗಲಕೋಟ ರವರು ಗಣ್ಯರಿಗೆ ಸ್ವಾಗತಿಸಿ ಮುಖ್ಯ ಅತಿಥಿಗಳ ಪರಿಚಯಿಸಿ ಸಮ್ಮೇಳನದಲ್ಲಿ ಸ್ಮಾರ್ಟ್ ತೋಟಗಾರಿಕೆ,

ಮಾಹಿತಿ ಸಂವಹನ ತಂತ್ರಜ್ಞಾನ ಮತ್ತು ತೋಟಗಾರಿಕೆಯಲ್ಲಿ ಕೃತಕ ಬುದ್ಧಿಮತ್ತೆ ಸೇರಿದಂತೆ ತೋಟಗಾರಿಕೆಯ ವಿವಿಧ ಆಯಾಮಗಳ ಕುರಿತು ಹತ್ತು ವಿಭಿನ್ನ ವಿಷಯಗಳ ಮೇಲೆ ಕ್ಷೇತ್ರದ ನುರಿತ ತಜ್ಞರುಗಳು ತಾಂತ್ರಿಕ ಗೋಷ್ಠಿಗಳನ್ನು ಆಯೋಜಿಸಲಾಗಿರುವ ಬಗ್ಗೆ ಮತ್ತು ದಿನಾಂಕ: 12 ರಿಂದ 14 ನೇ ಫೆಬ್ರವರಿ–2025 ರವರೆಗೆ (3 ದಿನ) ನಡೆಯಲಿರುವ ಸಮ್ಮೇಳನದ ಕುರಿತು ತಮ್ಮ ಪ್ರಾಸ್ತಾವಿಕ ನುಡಿಯಲ್ಲಿ ತಿಳಿಸಿದರು. ಸಮ್ಮೇಳನದ ಸಂಘಟನಾ ಅಧ್ಯಕ್ಷರು ಹಾಗೂ ಶಿಕ್ಷಣ ನಿರ್ದೇಶಕರಾದ ಡಾ. ಎನ್. ಕೆ. ಹೆಗಡೆ ರವರು ವಂದಿಸಿದರು.

ಪ್ರಾರ್ಥನಾ ಗೀತೆಯನ್ನು ವಿದ್ಯಾರ್ಥಿನಿಯಾದ ಕು. ಪೂಜಾ ಹಾಗೂ ರೈತ ಗೀತೆಯನ್ನು ಶ್ರೀ. ಶ್ರಿಪಾದ ಎಮ್. ಮಜಲಿ, ಸಹಾಯಕ ಆಡಳಿತಾಧಿಕಾರಿಗಳು, ಮತ್ತು ವಿದ್ಯಾರ್ಥಿಗಳು ಹಾಡಿದರು. ಡಾ. ಸರ್ವಮಂಗಳ ಚೋಲಿನ ಮತ್ತು ಡಾ. ಮಹಾಂತೇಶ ನಾಯಕ್ ಬಿ.ಎನ್. ಕಾರ್ಯಕ್ರಮವನ್ನು ನಿರೂಪಿಸಿದರು.

# ದತ್ತಿ ಪ್ರಶಸ್ತಿ ರಾಜ್ಯಮಟ್ಟದ ಕಾರ್ಯಕ್ರಮ ಯಶಸ್ವಿಗೆ ಪ್ರತಿಯೊಬ್ಬರ ಸಹಕಾರ ಅಗತ್ಯ: ಹಳ್ಳಿಕೇರಿ



**ಕೊಪ್ಪಳ :** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ರಾಜ್ಯ ಸಮಿತಿ ನಿರ್ಣಯಿಸಿದಂತೆ ಕೆ–ಯು ಡಬ್ಲ್ಯುಜೇ ರಾಜ್ಯಮಟ್ಟದ ದತ್ತಿ ನಿಧಿ ಪ್ರಶಸ್ತಿ ಪ್ರಧಾನ ಸಮಾರಂಭ ಕೊಪ್ಪಳದಲ್ಲಿ ಆಯೋಜಿಸಿ ಯಶಸ್ವಿಗೊಳಿಸಲು ಪ್ರತಿಯೊಬ್ಬರ ಸಹಕಾರ ಅಗತ್ಯ ಎಂದು ಕೆಯುಡಬ್ಲ್ಯೂ ಜೆ ಜಿಲ್ಲಾ ಅಧ್ಯಕ್ಷ ಹನುಮಂತ್ ಹಳ್ಳಿಕೇರಿ ಹೇಳಿದರು.

ಅವರು ಶುಕ್ರವಾರದಂದು ಇಲ್ಲಿನ ಪತ್ರಿಕಾ ಭವನ ದಲ್ಲಿ ನಡೆದ ಸಂಘದ ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ,

ದತ್ತಿ ಪ್ರಶಸ್ತಿ ಪ್ರಧಾನ ಸಮಾರಂಭ ಕೊಪ್ಪಳದಲ್ಲಿ ಆಯೋಜಿಸಲು ಸಿದ್ಧತೆ ನಡೆಯುತ್ತಿದೆ ಶೀಘ್ರ ಅಧಿಕೃತ ದಿನಾಂಕ ನಿಗದಿ ಮಾಡಿ ರಾಜ್ಯ ಸಮಿತಿಗೆ ತಿಳಿಸಿದ ಬಳಿಕ ಅಧಿಕೃತವಾಗಿ ಅವರು ಘೋಷಣೆ ಮಾಡಲಿದ್ದಾರೆ. ರಾಜ್ಯ ಘಟಕ ಅವರು ತೋರಿದ ಮಾರ್ಗದಲ್ಲಿ ಹಾಗೂ ರಾಜ್ಯ ಅಧ್ಯಕ್ಷರಾದ ಶಿವಾನಂದ ತಗಡೂರು ರವರ ಮಾರ್ಗದರ್ಶನದಲ್ಲಿ ಕಾರ್ಯಕ್ರಮ ಆಯೋಜನೆ ಮಾಡಿ ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡೋಣ ರಾಜ್ಯದ ಎಲ್ಲಾ 31 ಜಿಲ್ಲೆಗಳಿಂದ ಬರುವ ಸಂಘದ ಪದಾಧಿಕಾರಿ ಸದಸ್ಯರಿಗೆ ಸ್ವಾಗತಿಸೋಣ ಎಂದು ಸಂಘದ ಜಿಲ್ಲಾಧ್ಯಕ್ಷ ಹನುಮಂತ ಹಳ್ಳಿಕೇರಿ ಹೇಳಿದರು.

ವೇದಿಕೆ ಮೇಲೆ ರಾಜ್ಯ ಕಾರ್ಯಕಾರಣಿ ಸದಸ್ಯ ಎಂ ಸಾಧಿಕ ಅಲಿ, ರಾಜ್ಯ ಸಮಿತಿ ವಿಶೇಷ ಅಹ್ವಾನಿತ ಸದಸ್ಯ ಹೆಚ್ಎಸ್ ಹರೀಶ್, ರಾಷ್ಟ್ರೀಯ ಮಂಡಳಿ ಸದಸ್ಯ ಜಿಎಸ್ ಗೋನಾಳ್, ಜಿಲ್ಲಾ ಖಜಾಂಚಿ ರಾಜು ಬಿ ಆರ್ , ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಾಗರಾಜ್.ವೈ, ಜಿಲ್ಲಾ ಉಪಾಧ್ಯಕ್ಷ ರುದ್ರಗೌಡ ಪಾಟೀಲ್ ಜಿಲ್ಲಾ ಕಾರ್ಯದರ್ಶಿ ವೀರಣ್ಣ ಕಳ್ಳಿಮನಿ ಪತ್ರಿಕಾ ಭವನ ಕಟ್ಟಡ ಸಮಿತಿಯ ಅಧ್ಯಕ್ಷ ಎನ್ ಎಂ ದೊಡ್ಡಮನಿ ಸೇರಿದಂತೆ ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರು ತಾಲೂಕಿನ ಅಧ್ಯಕ್ಷರು ಮತ್ತು ಪ್ರಧಾನ ಕಾರ್ಯದರ್ಶಿಗಳು ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

# ಜಂತು ಹುಳಗಳಿಂದ ಮಕ್ಕಳಲ್ಲಿ ರಕ್ತಹೀನತೆ: ಡಾ. ಮುಕುಂದ

**ಜಮಖಂಡಿ :** ಜಂತು ಹುಳುಗಳನ್ನು ಹೊಂದಿರುವ ಮಕ್ಕಳು ಕಡ್ಡಾಯವಾಗಿ ಮಾತ್ರೆ ತಗೆದುಕೊಳ್ಳಬೇಕು. ಅಪೌಷ್ಟಿಕತೆ ಮತ್ತು ರಕ್ತಹೀನತೆಯಿಂದ ಬಳಲುತ್ತಿರುವ ಮಕ್ಕಳು ಮಾನಸಿಕ, ದೈಹಿಕ ಬೆಳವಣಿಗೆಗೆ ತುತ್ತಾಗುತ್ತಾರೆಂದು ವೈದ್ಯಾಧಿಕಾರಿ ಡಾ. ಮುಕುಂದ ಕಾಂಬಳೆ ಹೇಳಿದರು.

ತಾಲೂಕಿನ ಚಿಕ್ಕಪಡಸಲಗಿಯ ಶಿವಶರಣ ಹರಳಯ್ಯ ಸ್ಮಾರಕ ಪ್ರೌಢಶಾಲೆಯಲ್ಲಿ ಚಿಕ್ಕಲಕಿ ಕ್ರಾಸ್ ಸಮುದಾಯ ಆರೋಗ್ಯ ಕೇಂದ್ರ ಹಮ್ಮಿಕೊಂಡಿದ್ದ ಅಂತರರಾಷ್ಟ್ರೀಯ ಜಂತುಹುಳು ಬಾಧೆ ನಿವಾರಣೆ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಜಂತು ಹುಳುಗಳಿಂದ ತಮ್ಮನ್ನು ತಾವು ರಕ್ಷಿಸಿಕೊಳ್ಳಲು ಮನಸ್ಸು ತೋರಬೇಕು. ಶುದ್ಧ ನೀರು, ಆಹಾರ ತೆಗೆದುಕೊಳ್ಳಬೇಕು. ಸುತ್ತಲಿನ ಪರಿಸರ ಶುಚಿಯಾಗಿರಿಸಿಕೊಳ್ಳಬೇಕು. ಉಸಿರುಗಟ್ಟುವುದನ್ನು ತಡೆಗಟ್ಟಲು ಶುದ್ಧ ಕುಡಿಯುವ ನೀರು ಉಪಯೋಗಿಸಬೇಕು. ಶರೀರದಲ್ಲಿ ಆರೋಗ್ಯ ಸಂಪನ್ನತೆ ಇದ್ದರೆ ಮಾತ್ರ ಮನೋಭಾವ ಸಂತೃಪ್ತಿ ಇರುತ್ತದೆ. ಪ್ರತಿಯೊಬ್ಬರ ಸಾಧನೆ, ಯಶಸ್ವಿನ ಗುಟ್ಟು ಲವಲವಿಕೆ ಭರಿತ ಆರೋಗ್ಯದಲ್ಲಿ ಅಡಗಿದೆ ಎಂದರು.

ಚಿಕ್ಕಪಡಸಲಗಿ ಸಮುದಾಯ ಆರೋಗ್ಯಾಧಿಕಾರಿ ಆನಂದ ತೆಲಸಂಗ ಮಾತನಾಡಿ, ಮಕ್ಕಳಿಗೆ ಜಂತುಹುಳು ನಾಶಕ ಮಾತ್ರೆಗಳನ್ನು ಉಚಿತವಾಗಿ ಎಲ್ಲಾ ಶಾಲೆ, ಅಂಗನವಾಡಿ ಕೇಂದ್ರಗಳಲ್ಲಿ ಉಚಿತವಾಗಿ ನೀಡಲಾಗುತ್ತದೆ. ಶಾಲೆಗಳಲ್ಲಿ ದಾಖಲಾದ ಹಾಗೂ ಶಾಲೆಯಿಂದ ಹೊರಗುಳಿದ ಮಕ್ಕಳಿಗೂ ಮಾತ್ರೆ ನೀಡಿ ಅವರ ಆರೋಗ್ಯ ಕಾಪಾಡಲಾಗುತ್ತಿದೆ. ಅಲ್ಬೆಂಡರ್ಝೋಲ್ ಮಾತ್ರೆ ಮಕ್ಕಳಿಗೆ ಹಾಗೂ ವಯಸ್ಕರಿಗೆ ಒಂದು ಸುರಕ್ಷಿತ ಔಷಧವಾಗಿದೆ. ಇದನ್ನು ಅಗಿದು ನುಂಗಬೇಕು ಎಂದರು.

ನಿವೃತ್ತ ಹಿರಿಯ ಶಿಕ್ಷಕ ಬಸವರಾಜ ಅನಂತಪೂರ ಮಾತನಾಡಿ, ಮಕ್ಕಳು ಯಾವುದೇ ಕಾರಣಕ್ಕೂ ಹಿಂಜರಿಯದೆ ಮಾತ್ರೆ ಸ್ವೀಕರಿಸುವ ಭಾವ ಹೊಂದಬೇಕು. ಅನ್ಯಭಾಗ್ಯ ಐಸಿರಿಯ ಮುಂದೆ ಆರೋಗ್ಯ ಭಾಗ್ಯವೇ ಮೇಲು. ಇದನ್ನು ಇಂದಿನ ಯುವ ಮಕ್ಕಳು ಗಂಭೀರವಾಗಿ ಅರ್ಥೈಸಿಕೊಳ್ಳಬೇಕು.

ಆರೋಗ್ಯ ಸುರಕ್ಷತೆಗೆ ಸಂಬಂಧಿಸಿದಂತೆ ಆದ್ಯತೆ ನೀಡಬೇಕು ಎಂದರು.

"SIHI KAHI" Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State